

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 07 Issue : 123 Friday 17-01-2025 E-mail : maruti.b.hosamani76@gmail.com Page: 4 Price : Rs. 1/-


## ಪತ್ರಕರ್ತ ವೆಂಕಟೇಶ ಸಂಪ ಅವರಿಗೆ "ಪಬ್ಲಿಕ್ ಫೈಲ್ ನ್ಯೂಸ್ ನೆಟ್ವರ್ಕ್-2025 ವರ್ಷದ ಸಾಧಕ ಪ್ರಶಸ್ತಿ



**ಸಿಹಿ ಕಹಿ ಸುದ್ದಿ**

**ಬೆಳಗಾವಿ :** ಪಬ್ಲಿಕ್ ಫೈಲ್ ಪತ್ರಿಕಾ ಸಂಸ್ಥೆ (ರಿ) ನೀಡುವ "2025 ರ ವರ್ಷದ ಸಾಧಕ ರಾಜ್ಯ ಪ್ರಶಸ್ತಿ" ಯನ್ನು ಪತ್ರಕರ್ತ, ಸಂಪದ ಸಾಲು ಪತ್ರಿಕೆ ಸಂಪಾದಕ, ವೆಂಕಟೇಶ ಎಸ್ ಸಂಪ ಅವರಿಗೆ ಜನವರಿ 19 ರ ಭಾನುವಾರ ದಂದು ಉಡುಪಿಯ ಇನ್ಫೋಸಿಸ್ ಯಕ್ಷಗಾನ ಕಲಾ ರಂಗದಲ್ಲಿ ಪ್ರದಾನ ಮಾಡಲಾಗುವುದು ಎಂದು ಹಿರಿಯ ಪತ್ರಕರ್ತ, ಪಬ್ಲಿಕ್ ಫೈಲ್ ನ್ಯೂಸ್ ನೆಟ್ವರ್ಕ್ ಸಂಸ್ಥೆಯ ಮುಖ್ಯಸ್ಥರಾದ ಶ್ರೀ ಎಂ ಎನ್ ಕೊಟ್ಟಾರಿ ಅವರು ತಿಳಿಸಿದ್ದಾರೆ.

ವೆಂಕಟೇಶ ಸಂಪ ಅವರು ಕಳೆದ 18 ವರ್ಷಗಳಿಂದ ನಿರಂತರವಾಗಿ ಸಂಪದ ಸಾಲು ಎನ್ನುವ ಧನಾತ್ಮಕ ಪತ್ರಿಕೆಯನ್ನು ನಡೆಸುತ್ತಿರುವ ವೆಂಕಟೇಶ ಸಂಪರವರ ಸಾವಿರಾರು ಲೇಖನಗಳು ರಾಜ್ಯದ ಎಲ್ಲಾ ಪತ್ರಿಕೆಗಳಲ್ಲಿ ಪ್ರಕಟವಾಗಿವೆ ಹಾಗೂ ರೇಡಿಯೋ ಟಿವಿಗಳಲ್ಲಿ ನೂರಾರು ಕಾರ್ಯಕ್ರಮಗಳನ್ನು ನಡೆಸಿ ಕೊಟ್ಟಿದ್ದಾರೆ. ಇವರು ಹಲವಾರು ಟೀವಿ ಚಾನಲ್ ಗಳ ಪ್ಯಾನಲ್ ಡಿಸ್ಕಷನ್ ಗಳಲ್ಲಿ ಭಾಗವಹಿಸುವುದರ ಜೊತೆಗೆ ಹಲವಾರು ಸಿನಿಮಾ ಧಾರವಾಹಿಗಳಲ್ಲಿ ನಟಿಸಿದ್ದಾರೆ. ರಕ್ತದಾನ, ನೇತ್ರದಾನ, ಪರಿಸರ ಜಾಗೃತಿ ಅಭಿಯಾನ, ನೀರು ಉಳಿಸಿ ಅಭಿಯಾನ ಸೇರಿದಂತೆ ಹಲವಾರು ಸಾಮಾಜಿಕ ಕಾರ್ಯದಲ್ಲಿ ತೊಡಗಿದ್ದಾರೆ. ಒಃಂ ಪದವೀಧರ ಆಗಿರುವ ವೆಂಕಟೇಶ ಸಂಪ ಅವರು, ಹಲವು ಮಿಶ್ರ ಬೆಳೆಗಳನ್ನು ಬೆಳೆದು, ಸಾವಯವ ಕೃಷಿಯಲ್ಲೂ ಸಾಧನೆ ಮಾಡಿದ್ದಾರೆ.

"ಸಂಪದ ಫೌಂಡೇಶನ್ ಫಾರ್ ಪಬ್ಲಿಕ್ ಅವೇರ್ನಸ್" ಸಂಸ್ಥೆ ಮೂಲಕ ಹಲವಾರು ಸಾಮಾಜಿಕ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸುತ್ತಿದ್ದಾರೆ.

ಇದೆಲ್ಲವನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ವೆಂಕಟೇಶ ಸಂಪ ಅವರಿಗೆ ಪ್ರಧಾನ ಮಾಡಲಾಗುವುದು ಎಂದು ಕೊಟ್ಟಾರಿ ಅವರು ತಿಳಿಸಿದ್ದಾರೆ.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಂ.ಎಂ ಶರ್ಮಾ ಬೆಳಗಾವಿ**

## ವಿನೂತನ ಕಾರ್ಯವೈಖರಿ ಮೂಲಕ ರೈತರಿಗೆ ಜಾಗೃತಿ ಮೂಡಿಸಿದ-ರೋಣ ನಗರದ ಖಾಕಿ ಪಡೆ



**ರೋಣ :** ನಗರದಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ರೈತರಿಗೆ ರಸ್ತೆ ನಿಯಮಗಳನ್ನು ಪಾಲಿಸಲು ಹಾಗೂ ಅಪಘಾತಗಳನ್ನು ತಪ್ಪಿಸಲು ವಿನೂತನ ಕಾರ್ಯಕ್ರಮ ಆಯೋಜನೆ ಮಾಡಲಾಯಿತು ಅದುವೇ ರೈತರ ಚಕ್ಕಡಿಗಳಿಗೆ ಹಾಗೂ ಟ್ರ್ಯಾಕ್ಟರ್, ಟಂ,ಟಂ ಗಳಿಗೆ ರೇಡಿಯಂ ಅಂಟಿಸುವುದರ ಮೂಲಕ ರೈತರಿಗೆ ಜಾಗೃತಿ ಮೂಡಿಸಿದ ಖಾಕಿ ಪಡೆ

ಇತ್ತೀಚಿನ ದಿನಗಳಲ್ಲಿ ರೈತರು ಮನೆಯಿಂದ ಹೊಲಗಳಿಗೆ ತೆರಳುವಾಗ ಹಾಗೂ ಹೊಲಗಳಿಂದ ಮನೆಗೆ ತೆರುಳುವಾಗ ಅಪಘಾತ ಸಂಭವಿಸಿದ್ದನ್ನು ಕಂಡಿದ್ದೇವೆ.

ದ್ವಿಚಕ್ರ ವಾಹನ ಸವಾರರು ಇತರ ವಾಹನ ಸವಾರರು ರಸ್ತೆ ನಿಯಮಗಳನ್ನು ಪಾಲಿಸದೆ ಅಪಘಾತಕ್ಕೆ ಈಡಾಗಿದ್ದನ್ನು ಕಂಡಿದ್ದೇವೆ. ಆದ-ರೆ ರೈತರು ಸಹ ತಮ್ಮ ಚಕ್ಕಡಿಗಳಿಗೆ ಯಾವುದೇ ಗುರುತು ಇಲ್ಲದೆ ರಾತ್ರಿಯಲ್ಲಿ ಎದುರಿಗೆ ಬರುವ ವಾಹನಗಳಿಗೆ ಚಕ್ಕಡಿ ಗುರುತು ಸಿಗಲೆಂದು ರೇಡಿಯಂ ಅಂಟಿಸಲು ನಮ್ಮ ಪೊಲೀಸ್ ಇಲಾಖೆ ನಿರ್ಧರಿಸಿರುವುದು ಸ್ವಾಗತಾರ್ಹವಾದ ಕ್ರಮ ಆಗಿದೆ ಎಂದು ಎ.ಎಸ್.ಐ ಎಸ್.ಬಿ .ಪವಾಡಿ ಅವರು ರಸ್ತೆ ಅಪಘಾತಗಳನ್ನು ತಡೆಗಟ್ಟುವ ಉದ್ದೇಶದಿಂದ ರೋಣ ಪೊಲೀಸ್ ಠಾಣೆ ವ್ಯಾಪ್ತಿಗೆ ಒಳಪಡುವ ರಾಷ್ಟ್ರೀಯ ಹೆದ್ದಾರಿಗೆ ಹೊಂದಿ ಕೊಂಡಿರುವ ಶಾಂತಗೇರಿ. ಬೋಮ್ಮಸಾಗರ. ಸರ್ಜಾಪುರ. ಗ್ರಾಮಗಳಲ್ಲಿ ರೈತರ ಚಕ್ಕಡಿಗಳಿಗೆ ಹಾಗೂ ಟ್ರ್ಯಾಕ್ಟರ್, ಟಂ,ಟಂ ಗಳಿಗೆ ರೇಡಿಯಂ ಅಂಟಿಸುವುದರ ಮೂಲಕ ಅಪಘಾತ ತಡೆಗಟ್ಟುವ ರಸ್ತೆ ನಿಯಮಗಳನ್ನು ಉದ್ದೇಶಿಸಿ ಬುಧವಾರ ಮಾತನಾಡಿದರು.

ಈ ಸಂದರ್ಭದಲ್ಲಿ ಪೊಲೀಸ್ ಠಾಣೆಯ ಸಿಬ್ಬಂದಿ, ನಾಗಪ್ಪ ಮಂಗಳೂರು ಇದ್ದರು. ರೈತರಿಗೆ ರಸ್ತೆ ನಿಯಮಗಳನ್ನು ಪಾಲಿಸಲು ರೇಡಿಯಂ ಅಂಟಿಸಿದ ಖಾಕಿ ಪಡೆಗೆ ಸಾರ್ವಜನಿಕರು ಅಭಿನಂದನೆ ಹೇಳಿದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನೆಲ್:ಎಸ್.ವಿ ಸಂಕನಗೌಡ್ರ ರೋಣ ಗದಗ**

## ಅದ್ದೂರಿಯಾಗಿ ನಡೆದ ಬೆಳಗಾವಿಯ-ನುಡಿ ಸಡಗರ



**ಸಿಹಿ ಕಹಿ ಸುದ್ದಿ**

**ಬೆಳಗಾವಿ :** ಚೇತರ ಫೌಂಡೇಶನ್ ಧಾರವಾಡ ಕನ್ನಡ ಮತ್ತು ಸಂಸ್ಕೃತ ಇಲಾಖೆ ಬೆಳಗಾವಿ ಇವರ ಸಯೋಗದಲ್ಲಿ ಬೆಳಗಾವಿ ನುಡಿ ಸಡಗರ ಕಾರ್ಯಕ್ರಮ ಕುಮಾರ ಗಂಧರ್ವ ಕಲಾ ಮಂದಿರ ಬೆಳಗಾವಿಯಲ್ಲಿ ಜರಗಿತು. ಕಾರ್ಯಕ್ರಮದ ನೇತೃತ್ವ ಸುರೇಶ್ ಬೋರೆಕೊಪ್ಪ ಚೇತನ ಫೌಂಡೇಶನ್ ಪೋಷಕರು ಸಾಹಿತಿಗಳು ಬೆಳಗಾವಿ, ಚೇತನ ಫೌಂಡೇಶನ್ ನ ಮುಖ್ಯ ಸಂಚಾಲಕರು ಭಾಗ್ಯಶ್ರೀ ರಜಪೂತ, ವೀರೇಶ್ ಕೆ.ಎಸ್, ಸಂಗೀತ ಮಠಪತಿ, ಪ್ರಶಾಂತ್ ಗೌಡ ಪಾಟೀಲ್, ಮಂಜುಳ ಬೆಣ್ಣೆ, ಪ್ರೇಮ ಭಜಂತ್ರಿ, ನಿರಂಜನ್ ಕುಮಾರ್ ಎ, ಕಾರ್ಯಕ್ರಮವನ್ನು ಉದ್ಘಾಟಿಸಿದರು, ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಡಾ, ಜಿ ಶಿವಣ್ಣ ರಾಜ್ಯಾಧ್ಯಕ್ಷರು ಸುವರ್ಣ ಕರ್ನಾಟಕ ಪತ್ರಕರ್ತರ ಸಂಘ ಬೆಂಗಳೂರು,

ಕಾರ್ಯಕ್ರಮದಲ್ಲಿ ಚೇತನ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರು ಮತ್ತು ಕಾರ್ಯಕ್ರಮದಲ್ಲಿ ಪ್ರಾಸ್ತವಿಕವಾಗಿ ಚಂದ್ರಶೇಖರ ಮಾಡಲಗೇರಿ ಮಾತನಾಡಿ ಚೇತನ ಫೌಂಡೇಶನ್ ಅತ್ಯಂತ 233 ನೇ. ಕಾರ್ಯಕ್ರಮಗಳನ್ನು ನಡೆಸಿ ಕೊಂಡು ಬಂದಿದ್ದು. ಬೆಂಗಳೂರು ನುಡಿ ಸಡಗರ, ಇಂದು ಬೆಳಗಾವಿ ನುಡಿ ಸಡಗರ ಮತ್ತು ಮುಂದಿನ ದಿನಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ನುಡಿ ಸಡಗರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಮತ್ತು ಕನ್ನಡ ಸಾಹಿತ್ಯಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡಿದ ಮಹನೀಯರನ್ನು ಹಾಗೂ ಬೆಳಗಾವಿಯ ವಿದ್ವಾಂಸರನ್ನು ಈ ಕಾರ್ಯಕ್ರಮದಲ್ಲಿ ಸ್ಮರಿಸಿದರು. ಕನ್ನಡ ಸಾಹಿತ್ಯಕ್ಕೆ ಬೆಳಗಾವಿಯ ವಿದ್ವಾಂಸರ ಕುರಿತು ಸವಿವರವಾಗಿ ಮಾತನಾಡಿದರು. ಚೇತನ ಫೌಂಡೇಶನ್ ಅತ್ಯಂತ ಕ್ರಿಯಾಶೀಲವಾಗಿ ಕನ್ನಡ ನಾಡಿನ ಅನೇಕ ಸಾಧಕರನ್ನು ಗುರುತಿಸಿ ಗೌರವಿಸಿದೆ, ಡಾ, ಬಿ.ಎಸ್ ಪುಷ್ಪ ಸೇರಿದಂತೆ ಇತರರು ಕನ್ನಡ ಮನಸುಗಳು ಭಾಗವಹಿಸಿದ್ದರು.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಕೆ.ಎಸ್.ಲಳವೀರೇಶ್.ಕೆ.ಹೊಸಹಳ್ಳಿ**

## ಸರ್ಕಾರಿ ಕೆಲಸಕ್ಕೆ ಅಡ್ಡಿ: ಓರ್ವನ ಬಂಧನ



**ರಬಕವಿ-ಬನಹಟ್ಟಿ :** ತಾಲೂಕಿನ ಚಿಮ್ಮಡ ಗ್ರಾಮದ ಬಸ್ ನಿಲ್ದಾಣದಲ್ಲಿ ಕಳೆದ ಜನೇವರಿ 8 ರಂದು ಬಸ್ ಕಂಡಕ್ಟರನ ಕಾರ್ಯಕ್ಕೆ ಅಡ್ಡಿಪಡಿಸಿದ ಮೂವರು ಹಲ್ಲೆನಡೆಸಿದ ಹಿನ್ನೆಲೆಯಲ್ಲಿ ಬನಹಟ್ಟಿ ಪೊಲೀಸರು ಗುರುವಾರ ರಾತ್ರಿ ಓರ್ವನನ್ನು ಬಂಧಿಸಿದ್ದು, ಮತ್ತಿಬ್ಬರ ಬಂಧನಕ್ಕೆ ಜಾಲ ಬೀಸಿದ್ದಾರೆ. ಪ್ರಕರಣಕ್ಕೆಸಂಬಂಧಿಸಿದಂತೆಪ್ರಕಾಶಮಠಪತಿಎಂಬಾತನನ್ನುಬಂಧಿಸಿದ್ದು, ಇನ್ನಿಬ್ಬರು ಆರೋಪಿಗಳಾದ ವೀರೇಶ ಮಠಪತಿ, ಶ್ರೀಶೈಲ ಮಠಪತಿ ಎಂಬುವರನ್ನು ಶೀಘ್ರ ಬಂಧಿಸಿ ವಿಚಾರಣೆ ನಡೆಸಲಾಗುವುದೆಂದು ಪೊಲೀಸ್ ಮೂಲಗಳು ತಿಳಿಸಿದ್ದು, ಈ ಕುರಿತು ಫಿರ್ಯಾಧಿ ಬಸ್ ನಿರ್ವಾಹಕ ಸದಾಶಿವ ಬಂಡಿನವರರಿಂದ ಮೂವರು ಆರೋಪಿಗಳ ವಿರುದ್ಧ ಬನಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಡೆದಿದ್ದೇನು: ಕಳೆದ ಜನೇವರಿ 8 ರಂದು ಸಂಜೆ 5 ಗಂಟೆ ಸುಮಾರಿಗೆ ದೈನಂದಿನವಾಗಿ ಹೊರಡುತ್ತಿದ್ದ ವಿಜಯಪುರ-ಹುಕ್ಕೇರಿ ಬಸ್ ಬನಹಟ್ಟಿ ಬಸ್ ನಿಲ್ದಾಣದಿಂದ ಹೊರಟಿದೆ. ಭರ್ತಿ ತುಂಬಿದ ಬಸ್ ಚಲಿಸುವ ಸಂದರ್ಭ ವಿದ್ಯಾರ್ಥಿಯೋರ್ವ ಬಸ್ಸು ಹತ್ತುವಾಗ ನಿರ್ವಾಹಕ ಬಸ್ ನಿಲ್ಲಿಸಿಲ್ಲ.ಓಡಿಬಂದುಚಲಿಸುವಬಸ್‌ಹತ್ತಿ,ಬಸ್‌ನಿಲ್ಲಿಸಲುಆಗುವದಿಲ್ಲವೇ ? ಎಂದು ಅವಾಚ್ಯ ಶಬ್ದಗಳಿಂದ ಕಂಡಕ್ಟರನಿಗೆ ನಿಂದಿಸಿದ್ದಾನೆ. ಆ ಕಡೆ ನಿರ್ವಾಹಕನೂ ಅವಾಚ್ಯವಾಗಿ ಬೈದಿದ್ದಾನೆ. ಮಾತಿಗೆ ಮಾತು ಬೆಳೆದ ನಂತರ ವಿದ್ಯಾರ್ಥಿಯು ಮೊಬೈಲ್ ಮೂಲಕ ತನ್ನ ಮನೆಯವರನ್ನು ಸಂಪರ್ಕಿಸಿ ಚಿಮ್ಮಡ ಬಸ್ ನಿಲ್ದಾಣಕ್ಕೆ ಬರುವಂತೆ ತಿಳಿಸಿದ್ದಾನೆ.

ಬಸ್ ಚಿಮ್ಮಡ ಬಸ್ ನಿಲ್ದಾಣಕ್ಕೆ ಬರುವುದಷ್ಟೇ ತಡ, ಮೂವರೂ ಆರೋಪಿತರು ನಿರ್ವಾಹಕನನ್ನು ಬಸ್ಸಿಂದ ಕೆಳಗಿಳಿಸಿ ಹಿಗ್ಗಾ-ಮುಗ್ಗಾ ಥಳಿಸಿ ತೀವ್ರ ಗಾಯಗೊಳಿಸಿದ್ದಾರೆ. ಕಂಗೆಟ್ಟ ನಿರ್ವಾಹಕ ಬನಹಟ್ಟಿ ಪೊಲೀಸರಿಗೆ ದೂರು ನೀಡಿದ್ದಾನೆ.

## ಕಾಯಕ, ದಾಸೋಹ ಪ್ರಸಾದ ಶರಣರು ನೀಡಿದ ಮಹತ್ವದ ಸಂಗತಿಗಳು ಆಧ್ಯಾತ್ಮಿಕ ಗ್ರಂಥಾಲಯಗಳನ್ನು ಮಠಗಳಲ್ಲಿ ಆರಂಭಿಸಿದರೆ ಓದುಗರಿಗೆ ಅನುಕೂಲ



**ರಬಕವಿ-ಬನಹಟ್ಟಿ :** ಹನ್ನೆರಡನೆಯ ಶತಮಾನದಲ್ಲಿ ಬಸವಾದಿ ಶಿವಶರಣರು ರಚಿಸಿದ ಶರಣ ಸಾಹಿತ್ಯ ಬೆವರಿನ ಕಾವ್ಯವಾಗಿದೆ. ಕಾಯಕ ಬದುಕಿನ ಪೂಜೆಯಾಗಿತ್ತು. ಶ್ರೀಮಠಕ್ಕೆ ಶರಣರು ಗೌರವ ನೀಡುತ್ತಿದ್ದರು. ಕಾಯಕ, ದಾಸೋಹ ಪ್ರಸಾದ ಶರಣರು ನಮಗೆ ನೀಡಿದ ಮೂರು ಮಹತ್ವದ ಸಂಗತಿಗಳು ಎಂದು ನಿವೃತ್ತ ಅರ್ಥಶಾಸ್ತ್ರ ವಿಷಯದ ಉಪನ್ಯಾಸಕ ಪ್ರೊ. ಎಂ. ಎಸ್. ಬದಾಮಿ ತಿಳಿಸಿದರು.

ಅವರು ಇತ್ತೀಚೆಗೆ ಇಲ್ಲಿನ ಬ್ರಹ್ಮಾನಂದ ಉತ್ಸವದಲ್ಲಿ ಗುರುಸಿದ್ಧೇಶ್ವರ ಸ್ವಾಮೀಜಿ ಸಂಪಾದಿಸಿದ ಬ್ರಹ್ಮಾನಂದ ಸಂಕ್ರಮಣ ಕೃತಿಯ ಕುರಿತು ಮಾತನಾಡಿದರು.

ಶರಣ ಸಾಹಿತ್ಯವು ಬೇರೆ ದೇಶಗಳ ಭಾಷೆಗಳಲ್ಲಿ ಪ್ರಕಟಣೆಯಾಗಬೇಕಾಗಿದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಗಮನ ನೀಡಬೇಕಾಗಿದೆ. ವಚನ ಸಾಹಿತ್ಯದ ಜೊತೆಗೆ ಆಧ್ಯಾತ್ಮಿಕ ಗ್ರಂಥಾಲಯಗಳನ್ನು ಮಠಗಳಲ್ಲಿ ಆರಂಭಿಸಿದರೆ ಓದುಗರಿಗೆ ಅನುಕೂಲವಾಗುತ್ತದೆ ಎಂದು ಬದಾಮಿ ತಿಳಿಸಿದರು.

ಸಮಾಜದಲ್ಲಿ ಪರಿವರ್ತನೆಯಾಗುವಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು. ಮಹಾತ್ಮರನ್ನು ನೆನೆಯುವುದು ಮತ್ತು ಕೊಟ್ಟು ಹೋದ ಮೌಲ್ಯಗಳನ್ನು ನಾವು ಅರಿಯಬೇಕು. ಶಿವಾನಂದ ಸ್ವಾಮೀಜಿಯವರು ಯಾವುದೇ ಜಾತಿ ಮತಗಳ ಬೇಧ ಮಾಡದೆ ಎಲ್ಲರಿಗೂ ಸಮಾನವಾಗಿ ಉಪದೇಶ ಮಾಡಿದರು ಎಂದರು.

ಯಲಬುರ್ಗಾದ ಶ್ರೀಧರ ಮುರಡಿ, ಹಿರೇಮಠದ ಬಸವಲಿಂಗೇಶ್ವರ ಸ್ವಾಮೀಜಿ ಮಾತನಾಡಿ, ಮಹಾತ್ಮರ ಚರಿತ್ರೆಗಳನ್ನು ಓದುವುದರಿಂದ ಮತ್ತು ಅವರ ನಡೆ ನುಡಿಗಳನ್ನು ನಾವು ಕೂಡಾ ಅನುಸರಿಸಿದರೆ ನಮ್ಮ ಜೀವನ ಪಾವನವಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಹುಣಶ್ಯಾಳದ ನಿಜಗುಣ ದೇವರು, ಈಶ್ವರಿ ವಿಶ್ವವಿದ್ಯಾಲಯದ ಬಿ. ಎಂ. ಪಾಟೀಲ, ಬಾಗಲಕೋಟೆ ಜಿಲ್ಲಾ ಪಂಚಾಯ್ತಿಯ ಹಣಕಾಸು ಅಧಿಕಾರಿ ಸಿದ್ದರಾಮ ಉಕ್ಕಲಿ, ಕೃತಿಯ ಸಂಪಾದಕ ಗುರುಸಿದ್ಧೇಶ್ವರ ಸ್ವಾಮೀಜಿ ಮಾತನಾಡಿದರು.

ಬಸವಲಿಂಗಯ್ಯ ಹಿಡಕಲ್ಲಮಠ ಮತ್ತು ಶಂಕ್ರಯ್ಯ ಹಿಡಕಲ್ಲಮಠ ಸಂಗೀತ ಸೇವೆಯನ್ನು ನೀಡಿದರು.

ಕಿತ್ತಲಿಯ ಮಂಜುನಾಥ ದೇವರು, ಶರಣೆ ಮೈತ್ರಾದೇವಿ, ಮಲ್ಲೇಶಪ್ಪ ಕುಚನೂರ, ಗುರು ಹೊರಟ್ಟಿ, ಈರಣ್ಣ ಗುಣಕಿ, ಪಿ. ಎಚ್. ಪ್ರತಾಪ, ಮಲ್ಲಿಕಾರ್ಜುನ ಗಡೆನ್ನವರ, ಮಹಾದೇವ ಸೋನಾರ ಉಪಸ್ಥಿತರಿದ್ದರು.

## ಭೂ ದಾಖಲೆಗಳ ಡಿಜಿಟಲೀಕರಣ ಕಾರ್ಯಕ್ಕೆ ಚಾಲನೆ ನೀಡಿದ ಶಾಸಕ ಸಿದ್ದು ಸವದಿ



**ರಬಕವಿ-ಬನಹಟ್ಟಿ :** ಭೂ ದಾಖಲೆಗಳ ಡಿಜಿಟಲೀಕರಣದಿಂದ ಹಳೆಯ ದಾಖಲಾತಿಗಳ ಸಂರಕ್ಷಣೆಯಾಗಲಿದೆ ಎಂದು ತೇರದಾಳ ಮತಕ್ಷೇತ್ರದ ಶಾಸಕ ಸಿದ್ದು ಸವದಿ ಹೇಳಿದರು.

ಅವರು ಗುರುವಾರ ರಬಕವಿ-ಬನಹಟ್ಟಿ ತಾಲೂಕಿನ ತಹಶೀಲ್ದಾರ ಕಛೇರಿಯಲ್ಲಿ ತಾಲೂಕಿನ ಭೂ ದಾಖಲೆಗಳ ಗಣಕೀಕರಣ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಇಂದಿನ ಯುಗವು ಡಿಜೀಟಲಿಕರಣದಿಂದಾಗಿ ಬಹಳಷ್ಟು ಮುಂದೆ ಬಂದಿದ್ದು ನಾವು ಕೂಡಾ ಅದಕ್ಕೆ ತಕ್ಕಂತೆ ಹೊಂದಿಕೊಳ್ಳಬೇಕು. ಡಿಜಿಟಲೀಕರಣ ಮಾಡುವಾಗ ಅಧಿಕಾರಿಗಳು ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದರು.

ಈ ವೇಳೆ ರಬಕವಿ-ಬನಹಟ್ಟಿ ತಹಶೀಲ್ದಾರ ಗಿರೀಶ ಸ್ವಾದಿ ಮಾತನಾಡಿ, ತಾಲ್ಲೂಕು ಕಛೇರಿ, ಸರ್ವೆ ಮತ್ತು ನೋಂದಣಿ ಇಲಾಖೆಗಳ ಎಲ್ಲಾ ಭೂ ದಾಖಲೆಗಳ ಡಿಜಿಟಲೀಕರಣ ಕಾರ್ಯ ನಡೆಯುತ್ತಿದೆ. ಹಳೆಯ ದು:ಸ್ಥಿತಿಯಲ್ಲಿರುವ ಭೂ ದಾಖಲೆಗಳನ್ನು ಶಾಶ್ವತ ಡಿಜಿ ದಾಖಲೆಗಳಾಗಿ ಪರಿವರ್ತನೆ, ರೆಕಾರ್ಡ ರೂಮ್ ಗಳಿಂದ ಪಡೆದುಕೊಳ್ಳಲು ಇರುವ ತೊಂದರೆ ನಿವಾರಣೆ, ಹಳೆಯ ದಾಖಲೆಗಳ ಸಂರಕ್ಷಣೆ ಹಾಗೂ ಕಳುವಾಗಲು, ತಿದ್ದಲು ಅಸಾಧ್ಯವಾಗಿದೆ ಎಂದರು. ಅಲ್ಲದೆ ನೀವೇ ನೇರವಾಗಿ ಡಿಜಿಟಲ್ ಮಾಧ್ಯಮದಿಂದ ಭೂ ದಾಖಲೆಗಳನ್ನು ಪಡೆದುಕೊಳ್ಳಬಹುದಾಗಿದ್ದು, ನಿಮ್ಮ ದಾಖಲೆಗಳನ್ನು ನಿಮ್ಮ ಕೈಗೆ ತಲುಪಿಸುವ ಯೋಜನೆ ಇದಾಗಿದೆ. ವಿಳಂಬ, ಅಡೆತಡೆಗಳನ್ನು ಆಲಿಸಿ, ತ್ವರಿತ ಆಡಳಿತ ಸೇವೆಯನ್ನು ಒದಗಿಸುವ ಪ್ರಯತ್ನ ಇದಾಗಿದೆ ಎಂದು ತಹಶೀಲ್ದಾರ ಗಿರೀಶ ಸ್ವಾದಿ ಹೇಳಿದರು.

ಈ ಸಂದರ್ಭದಲ್ಲಿ ತೇರದಾಳ ತಹಶೀಲ್ದಾರ ವಿಜಯಕುಮಾರ ಕಡಕೋಳ, ತಾ. ಪಂ. ಇ.ಓ. ಸಿದ್ದಪ್ಪ ಪಟ್ಟಿಹಾಳ, ಶಿರಸ್ತೆದಾರರಾದ ಆರ್. ಎಸ್. ಸಾತಿಹಾಳ, ಶಾಂತಾ ಕೂಗಾಟೆ, ರವಿ ಹುಲ್ಲೆನ್ನವರ, ಪೌರಾಯುಕ್ತ ಜಗದೀಶ ಈಟಿ, ಚೇತನ ಭಜಂತ್ರಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ರಾಷ್ಟ್ರೀಯ ಹಬ್ಬಗಳಲ್ಲಿ ಸ್ವಯಂ ಪ್ರೇರಣೆಯಿಂದ ಭಾಗವಹಿಸಿ: ಶಾಸಕ ಸಿದ್ದು ಸವದಿ

**ರಬಕವಿ-ಬನಹಟ್ಟಿ :** ದೇಶದ ಜನರಲ್ಲಿ ರಾಷ್ಟ್ರಾಭಿಮಾನವನ್ನು ಹೆಚ್ಚಿಸುವ ದಿಶೆಯಲ್ಲಿ ಪ್ರತಿಯೊಬ್ಬರೂ ರಾಷ್ಟ್ರೀಯ ಹಬ್ಬಗಳಲ್ಲಿ ಕಡ್ಡಾಯವಾಗಿ, ಸ್ವಯಂ ಪ್ರೇರಣೆಯಿಂದ ಭಾಗಿಯಾಗಬೇಕು ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಅವರು ಶುಕ್ರವಾರ ರಬಕವಿ-ಬನಹಟ್ಟಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ಗಣರಾಜ್ಯೋತ್ಸವ ನಿಮಿತ್ಯವಾಗಿ ಹಮ್ಮಿಕೊಂಡ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಗಣರಾಜ್ಯೋತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುವುದು. ಆ ನಿಟ್ಟಿನಲ್ಲಿ ತಾಲೂಕಿನಾದ್ಯಂತ ಎಲ್ಲ ಕಛೇರಿಗಳಲ್ಲಿ ರಾಷ್ಟ್ರೀಯ ಹಬ್ಬವನ್ನು ಸಂಭ್ರಮದಿಂದ ಆಚರಿಸಬೇಕು. ಈ ಸಲ ಗಣರಾಜ್ಯೋತ್ಸವವನ್ನು ರಬಕವಿಯ ಹೊಸ ಬಸ್ ನಿಲ್ದಾಣದ ಬಳಿಯ ರಾಮಪ್ಪ ಚಿಕ್ಕೋಡಿ ಕ್ರೀಡಾಂಗಣದಲ್ಲಿ ಮುಂಜಾನೆ ೯ ಕ್ಕೆ ಆಚರಿಸಲಾಗುವುದು. ಆ ನಿಟ್ಟಿನಲ್ಲಿ ಎಲ್ಲ ಸರಕಾರಿ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದರು.

ರಾಷ್ಟ್ರದ ಅಖಂಡತೆಗೆ ನಾವೆಲ್ಲರೂ ಶ್ರಮಿಸಬೇಕು. ರಾಷ್ಟ್ರೀಯ ಹಬ್ಬಗಳು ಯಾವುದೇ ಜಾತಿ, ಮತ, ಪಂಥ ಮತ್ತು ಧರ್ಮಗಳಿಗೆ ಸೀಮಿತವಾಗಿರುವುದಿಲ್ಲ. ಈ ಸಂದರ್ಭದಲ್ಲಿ ನಗರದ ಸ್ವಚ್ಛತೆಗೆ ಹೆಚ್ಚಿನ ಆದ್ಯತೆಯನ್ನು ನೀಡಬೇಕು ಎಂದು ಶಾಸಕ ಸವದಿ ನಗರಸಭೆ ಅಧಿಕಾರಿಗಳಿಗೆ ತಿಳಿಸಿದರು.



ಇದೇ ಸಂದರ್ಭದಲ್ಲಿ ತಹಶೀಲ್ದಾರ್ ಗಿರೀಶ ಸ್ವಾದಿ ಮಾತನಾಡಿ, ಶಿಸ್ತುಬದ್ಧವಾದ ಕಾರ್ಯಕ್ರಮಕ್ಕೆ ಪ್ರತಿಯೊಬ್ಬರ ಸಹಾಯ ಸಹಕಾರ ಅಗತ್ಯವಾಗಿದೆ. ತಾಲೂಕಿನ ಎಲ್ಲ ಅಧಿಕಾರಿಗಳು ಕಡ್ಡಾಯವಾಗಿ ಯಾವುದೇ ನೆಪ ಹೇಳದೆ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದರು.

ರಬಕವಿ-ಬನಹಟ್ಟಿ ತಾಲೂಕಿನಾದ್ಯಂತ ಪ್ಲಾಸ್ಟಿಕ್ ಧ್ವಜ ಮಾರಾಟ, ಬಳಕೆ ಮಾಡುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಪ್ಲಾಸ್ಟಿಕ್ ಧ್ವಜ ಮಾರಾಟಗಾರರಿಗೆ ತಿಳುವಳಿಕೆ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮೊದಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಆದಾಗ್ಯೂ ಪ್ಲಾಸ್ಟಿಕ್ ಧ್ವಜ ಮಾರಾಟ ಹಾಗೂ ಬಳಕೆ ಕಂಡು ಬಂದಲ್ಲಿ ಅಂತಹವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ತಹಶೀಲ್ದಾರ ಗಿರೀಶ ಸ್ವಾದಿ ಹೇಳಿದರು.

ಸಭೆಯಲ್ಲಿ ತಾಲೂಕು ಪಂಚಾಯತ್ ಅಧಿಕಾರಿ ಸಿದ್ದಪ್ಪ ಪಟ್ಟಿಹಾಳ, ನಗರಸಭೆ ಅಧ್ಯಕ್ಷೆ ವಿದ್ಯಾ ಧಬಾಡಿ, ಶಿರಸ್ತೆದಾರ ಆರ್. ಎಸ್. ಸಾತಿಹಾಳ, ರಬಕವಿ-ಬನಹಟ್ಟಿ ಪೌರಾಯುಕ್ತ ಜಗದೀಶ ಈಟಿ, ಜಮಖಂಡಿ ಕ್ಷೇತ್ರ ಶಿಕ್ಷಣಾಧಿಕಾರಿ ಎ. ಕೆ. ಬಸಣ್ಣವರ, ಅಗ್ನಿಶಾಮಕ ದಳದ ಎ.ಎಸ್.ಐ. ರಮೇಶ ಚಿವಟೆ, ಬನಹಟ್ಟಿ ಪೊಲೀಸ್ ಠಾಣೆಯ ಎ.ಎಸ್.ಐ. ಎಸ್. ಎಮ್. ಹುದ್ದಾರ, ವಸಂತ ಹಿರೇಮಠ, ಬಸವರಾಜ ಹನಗಂಡಿ, ಬಿ. ಎಂ. ಹಳೇಮನಿ, ಪ್ರಾಚಾರ್ಯ ಬಿ. ಆರ್. ಗೊಡ್ಡಾಳೆ, ಬಸವರಾಜ ಗುಡೋಡಗಿ, ರವಿ ಕೊರ್ತಿ, ಗೌರಿ ಮಿಳ್ಳಿ, ಪ್ರಕಾಶ ಮಠಪತಿ, ಬಿ. ಜೆ. ಜೋರಾಪುರ, ಮಹಾಂತೇಶ ಮುರಗೋಡ, ಪ್ರಕಾಶ ಕೊಣ್ಣೂರ, ಸಂತೋಷ ಬಡ್ಡಿ, ಶಂಕರ ಕಲ್ಯಾಣಿ, ಡಬ್ಲ್ಯೂ. ವಾಯ್. ಭಜಂತ್ರಿ, ಎಂ. ಎಸ್. ಗಡೆನ್ನವರ, ಶಿವಾನಂದ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಮುಖಂಡರು ಹಾಜರಿದ್ದರು.

# ಪ್ರಕಾಶ ತಪಶೆಟ್ಟಿ ಮತ್ತು ಅವರ ಟೀಂ ಸತ್ಕಾರ



**ಬಾಗಲಕೋಟ :** ಕರ್ನಾಟಕ ರಾಜ್ಯದ ಪ್ರತಿಷ್ಠಿತ ಇಲ್ಲಿಯ ಬಸವೇಶ್ವರ ಸಹಕಾರಿ ಬ್ಯಾಂಕಿನ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಪ್ರಕಾಶ ತಪಶೆಟ್ಟಿ ಅವರನ್ನು ಬಾಗಲಕೋಟ ಜಿಲ್ಲಾ ಮರ್ಚಂಟ್ಸ (ವ್ಯಾಪಾರಸ್ಥರಾದ) ಸಂಘದ ಅಧ್ಯಕ್ಷ ನಾಗರಾಜ ಕುಪ್ಪಸ್ತ, ರವಿ ಕುಮಟಗಿ, ರಾಮ ಮುಂದಡಾ,
ಡಾ. ಶೇಖರ ಮಾನೆ, ಶಿವಪುತ್ರಪ್ಪ ಕಣಗಿ, ಬಲ್ಲಿ ಸ್ವಾಮಿಗಳು ಸುರಪೂರ, ರೇಲ್ವೆ ಹೋರಾಟ ಸಮೀತಿಯ ರಾಜ್ಯಾಧ್ಯಕ್ಷ ಕುತುಬುದ್ದೀನ ಖಾಜಿ, ಬಾಳು ಉಳ್ಳಾಗಡ್ಡಿ, ವಿರುಪಾಕ್ಷಿ ಅಮೃತಕರ, ಪತಂಗೆ, ಪುಕರಾಜ ಬೇತಾಳ, ರಾಜು ಕುಕರೇಜ ಮುಂತಾದವರು ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಬ್ಯಾಂಕಿನ ನಿರ್ದೇಶಕರಾದ ಶ್ರೀನಿವಾಸ ಬಳ್ಳಾರಿ, ಶಂಕರ ತಪಶೆಟ್ಟಿ, ವ್ಹಿ. ವ್ಹಿ. ಶಿರಗಣ್ಣವರ ಉಪಸ್ಥಿತರಿದ್ದರು.

# ಪಠ್ಯೇತರ ಚಟುವಟಿಕೆಗಳಿಂದ ಸಾಮಾನ್ಯ ಜ್ಞಾನ ಹೆಚ್ಚಳ



**ತೇರದಾಳ :** ಮಕ್ಕಳಿಗೆ ಕೇವಲ ಪಠ್ಯದಲ್ಲಿನ ಪಾಠಗಳನ್ನು ಹೇಳದೆ ಪಠ್ಯೇತರ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಸೂಕ್ತ. ಇಂತಹ ಕಾರ್ಯಕ್ರಮಗಳಿಂದ ಮಕ್ಕಳಲ್ಲಿ ಸಾಮಾನ್ಯ ಜ್ಞಾನ ಹೆಚ್ಚಾಗುತ್ತದೆ ಎಂದು ಬೆಳಗಾವಿ ಶೇಗುಣಸಿಯ ಸದ್ಗುರು ಹನಮಂತಪ್ಪ ಮಹಾರಾಜರು ಹೇಳಿದರು.
ಇಲ್ಲಿನ ಕಲ್ಮೇಶ್ವರ ವಿದ್ಯಾವರ್ಧಕ ಸಂಘದ ವಿನಾಯಕ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಮಕ್ಕಳ ಸಂತೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.
ಮಕ್ಕಳಲ್ಲಿ ಪಾಲಕರು ಆಸಕ್ತಿ ಹೆಚ್ಚಿಸುವ ಕೆಲಸ ಮಾಡಿದರೆ ಶಿಕ್ಷಕರು
ಕಲಿಕೆಯ ಹಂಬಲ ಹೆಚ್ಚಾಗುವಂತೆ ನೋಡಿಕೊಳ್ಳಬೇಕೆಂದು ಹೇಳಿದರು.
ಸ್ಥಳೀಯ ಹಿರೇಮಠದ ಗಂಗಾಧರ ದೇವರು ಮಾತನಾಡಿ ಶಿಕ್ಷಣ ಬದುಕು ಕಲಿಸುವ ಒಂದು ಸೂತ್ರವಾಗಿದೆ. ಯಾವುದೇ ಕ್ಷೇತ್ರ ಇರಲಿ ಸಾಧಿಸಬೇಕೆಂಬ ಛಲ ಹಾಗೂ ಅದನ್ನು ಪಡೆಯಲು ನಿರಂತರ ಪರಿಶ್ರಮ ಅಗತ್ಯವಾಗಿದೆ ಎಂದು ಹೇಳಿದರು. ಸಂಸ್ಥೆಯ ಅಧ್ಯಕ್ಷ ಎಂ. ಎಸ್. ಗೌಡಪ್ಪನವರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಗುರು ಶಂಕರ ತಿಗಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

# ಉಚಿತ ಕಣ್ಣಿನ ತಪಾಸಣಾ ಶಿಬಿರ



**ಬಾಗಲಕೋಟೆ :** ದಿ. 10 ರಂದು ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ನರೆನೂರ ತಾಂಡಾದಲ್ಲಿನ ಸಾರ್ವಜನಿಕರಿಗೆ ಸರ್ಚ್ ಸ್ವಯಂ ಸೇವಾ ಅಭಿವೃದ್ಧಿ ಸಂಸ್ಥೆ (ರಿ) ಬಾಗಲಕೋಟೆ, ಒನ್ ಸೈಟ್ ಎಸ್ಸಿಲರ್ ಲೆಕ್ಸೋಟಿಕಾ ಫೌಂಡೇಶನ್
ಬೆಂಗಳೂರು ಹಾಗೂ ಶ್ರೀ ಬನಶಂಕರಿ ಕಣ್ಣಿನ ಆಸ್ಪತ್ರೆ ಬಾಗಲಕೋಟೆ ಇವರ ಸಹಯೋಗದಲ್ಲಿ ಸಾರ್ವಜನಿಕ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಆಯೋಜಿಸಲಾಗಿ–ತ್ತು. ಶಿಬಿರದಲ್ಲಿ 100 ಜನರಿಗೆ ಉಚಿತವಾಗಿ ಕಣ್ಣಿನ ತಪಾಸಣೆ ಮಾಡಿಕನ್ನಡಕವನ್ನುಉಚಿತವಾಗಿ ವಿತರಣೆ ಮಾಡಲಾಯಿತು.
25 ಜನರಿಗೆ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಯಿತು. ಈ ಶಿಬಿರದಲ್ಲಿ ಸಾರ್ವಜನಿ ಕರು ಸಂತೋಷದಿಂದ ಭಾಗವಹಿಸಿ ಅವಕಾಶವನ್ನು ಸದುಪಯೋಗ ಪಡೆಸಿಕೊಂಡರು.
ಬನಶಂಕರಿ ಕಣ್ಣಿನ ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಗಳು ತಪಾಸಣೆ ನಡೆಸಿದರು.
ಸರ್ಚ್ ಸಂಸ್ಥೆಯ ನಿರ್ದೇಶಕರಾದ ಶ್ರೀ. ವೆಂಕಟೇಶ್ ಇವರು ಉಸ್ತುವಾರಿ ವಹಿಸಿ, ಯಶಸ್ವಿಗೊಳಿಸಿದರು.

# ಬ್ರಾಹ್ಮಣ ಮಹಾಸಭಾ ಸಮ್ಮೇಳನ ಯಶಸ್ವಿಗೊಳಿಸಲು ನಾಗಸಂಪಗಿ ಮನವಿ



**ಬಾದಾಮಿ :** ಮತ, ಮಠಗಳ ಭೇದವನ್ನು ಮರೆತು ಬ್ರಾಹ್ಮಣ ಎನ್ನುವ ಸಂಕಲ್ಪವನ್ನು ತೊಟ್ಟು ಬರಲಿರುವ ಜ.18 ಮತ್ತು 19 ರಂದು ಬೆಂಗಳೂ–ರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ಅಖಿಲ ಕರ್ನಾಟಕ ಬ್ರಾಹ್ಮಣ ಮಹಸಭಾದ ಸಮ್ಮೇಳನವನ್ನು ಯಶಸ್ವಿಗೊಳಿಸಿ ಎಂದು ಪಂ. ಬಿಂದುಮಾಧವಾಚಾರ್ಯ ನಾಗಸಂಪಗಿ ಕರೆ ನೀಡಿದರು.
ಅವರು ಮಂಗಳವಾರ ಬಾದಾಮಿ ನಗರದಲ್ಲಿ ಬ್ರಾಹ್ಮಣ ಸಮಾಜ ಬಾಂಧವರನ್ನು ಉದ್ದೇಶಿಸಿ ಮಾತನಾಡಿ ಬ್ರಾಹ್ಮಣರ ಶಕ್ತಿ ಪ್ರದರ್ಶನಕ್ಕೆ ವೇದಿಕೆ ಸಿದ್ಧಗೊಂಡಿದೆ. ಹೆಚ್ಚಿನ ಸಂಖ್ಯೆಯಲ್ಲಿ ವಿಪ್ರ ಸಮಾಜ ಬಾಂಧವರು ಪಾಲ್ಗೊಳ್ಳುವ ಮೂಲಕ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕೆಂದು ತಿಳಿ ಹೇಳಿದರು.
ರಾಜ್ಯ ಉಪಾಧ್ಯಕ್ಷ ಡಾ.ಗಿರೀಶ ಮಾಸೂರಕರ, ಸಹ ಕಾರ್ಯದರ್ಶಿ ವಿನಾಯಕ ತಾಳಿಕೋಟಿ ಮಾತನಾಡಿ ಸಮ್ಮೇಳನದಲ್ಲಿ ಭಾಗವಹಿಸುವ ಮೂಲಕ ಉತ್ತಮ ಸಂದೇಶವನ್ನು ಕೊಡಬೇಕಾಗಿದೆ. ಹೀಗಾಗಿ ವಿಪ್ರರು ಒಗ್ಗಟ್ಟಾಗಿ ಶಕ್ತಿ ಪ್ರದರ್ಶನಕ್ಕೆ ಕೈಜೋಡಿಸಬೇಕೆಂದು ಹೇಳಿದರು.
ಬಾಗಲಕೋಟ ಜಿಲ್ಲಾಧ್ಯಕ್ಷ ನರಸಿಂಹ ಆಲೂರ, ಉಪಾಧ್ಯಕ್ಷ ಸಂತೋಷ ಗದ್ದನಕೇರಿ ಮಾತನಾಡಿ ಸಮ್ಮೇಳನಕ್ಕೆ ಬರುವವರ ಸಂಖ್ಯೆಯನ್ನು ಮೊದಲೇ ನೀಡಿ ವಸತಿ ಖಚಿತಪಡಿಸಿಕೊಳ್ಳಬೇಕು, ಈಗಾಗಲೇ ಜಿಲ್ಲೆಯಾಧ್ಯಾಂತ ಸಂಚರಿಸಿ ಬ್ರಾಹ್ಮಣರನ್ನು ಒಗ್ಗೂಡಿಸುವ ಪ್ರಯತ್ನ ನಡೆದಿದೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಉಪ ಸಂಚಾಲಕ ಅಡಿವೇಂದ್ರ ಇನಾಮದಾರ ಮಾತನಾಡಿ ತ್ರಿಮತಸ್ಥರು ಭಿನ್ನ ನಿಲವು ತಾಳದೇ ಪರಸ್ಪರ ನಾವೆಲ್ಲ ಒಂದು ಎಂಬ ಭಾವನೆಯೊಂದಿಗೆ ಸಮ್ಮೇಳನದ ಯಶಸ್ವಿಗೆ ಮುನ್ನುಡಿ ಬರೆಯಬೇಕೆಂದರು. ವೇದಿಕೆಯಲ್ಲಿ ಕಾರ್ಯದರ್ಶಿ ಎಸ್.ಕೆ. ಕುಲಕರ್ಣಿ ಇದ್ದರು.
ರಾಮ ಭಟ್ಟ್ ವೇದಘೋಷ ಪಠಿಸಿದರು, ನ್ಯಾಯವಾದಿ ಕೆ.ವ್ಹಿ. ಕೆರೂರ ಸ್ವಾಗತಿಸಿದರು, ಡಾ.ಆನಂದಪೂಜಾರನಿರೂಪಿಸಿವಂದಿಸಿದರು.
ವಿನೋದದೇಶಪಾಂಡೆ,ವಿಷ್ಣುಗುಡಿ,ಬಲರಾಮ ಇನಾಮದಾರ, ವಿಲಾಸ ಜೋಶಿ, ಜಯಪ್ರಕಾಶ ಕುಲಕರ್ಣಿ, ವಸಂತ ಗುಡಿ, ನವೀನ ಜೋಶಿ, ವ್ಹಿ.ಜಿ. ಕುಲಕರ್ಣಿ, ಪ್ರಸನ್ನ ಮುಗಳಿ, ದಿಗಂಬರ ಸಂಗಮ, ದತ್ತಣ್ಣ ಸೇರಿದಂತೆ ಇನ್ನಿತರರು ಇದ್ದರು.

# ಇಸ್ರೋ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ವಿಜ್ಞಾನಿ ವಿ. ನಾರಾಯಣನ್ ಅವರಿಗೆ ಅಭಿನಂದನೆಗಳು



**ಬಾಗಲಕೋಟೆ :** ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ನೂತನ ಮುಖ್ಯಸ್ಥರಾಗಿ ಡಾ.ವಿ.ನಾರಾಯಣನ್ ಅವರನ್ನು ಕೇಂದ್ರ ಸರ್ಕಾರ ನೇಮಕ ಮಾಡಿರುವುದು ಶ್ಲಾಘನೀಯವಾಗಿದೆ.
ಅವರು 2023 ನವೆಂಬರ 23 ರಂದು ಮುಧೋಳದಲ್ಲಿ ಬಿ.ವಿ.ವಿ.ಸಂಘದ ಬಿಳೂರು ಗುರುಬಸವ ಮಹಾಸ್ವಾಮಿಜಿ ತಾಂತ್ರಿಕ ಕಾಲೇಜಿನಲ್ಲಿ ಅಂತರಾಷ್ಟ್ರೀಯ ಬಾಹ್ಯಾಕಾಶ ಸಪ್ತಾಹ 2023 ರನ್ನು ಉದ್ಘಾಟಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ್ದರು, ಅಲ್ಲದೆ ನಮ್ಮ ಸಂಘದ ಕಛೇರಿಗೆ ಆಗಮಿಸಿ ಸಂಘದ ಕಾರ್ಯದ ಬಗ್ಗೆ ಸಂತಸ ವ್ಯಕ್ತ ಪಡಿಸಿದ್ದರು, ಇಂದು ಅವರು ಇಸ್ರೋ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರಿಂದ ಅವರಿಗೆ ಬಿ.ವಿ.ವಿ.ಸಂಘದ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು.

# ಹಾಲುಮತ ಸಂಸ್ಕೃತಿ ವೈಭವ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ



**ಬಾದಾಮಿ :** ಕಾಗಿನೆಲೆ ಕನಕ ಗುರು ಪೀಠ ಗುಲ್ಬರ್ಗ ವಿಭಾಗದ (ತಿಂಥಣಿ ಬ್ರಿಜ್) ನಲ್ಲಿ ಜನೇವರಿ 12,13, 14, ರಂದು ನಡೆಯುವ ಹಾಲುಮತ ಸಂಸ್ಕೃತಿ ವೈಭವ2025 ರ ಕಾರ್ಯಕ್ರಮದ ಪತ್ರಿಕೆಯನ್ನು(ಪೋಸ್ಟರ್) ರನ್ನು ಮಂಗಳವಾರ ಮಾಜಿ ಸಚಿವ ಬಿ.ಬಿ.ಚಿಮ್ಮನಕಟ್ಟಿ ಹಾಗೂ ಅವರ ಧರ್ಮಪತ್ನಿ ರತ್ನಮ್ಮ ಬಿ. ಚಿಮ್ಮನಕಟ್ಟಿ ಅವರ ಚಾಲುಕ್ಯನಗರದ ಗೃಹನಿವಾಸದಲ್ಲಿ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಮಂಜುನಾಥ ಹೊಸಮನಿ, ಹನಮಂತ ಅಪ್ಪನ್ನವರ, ಶರಣಗೌಡ ಪಾಟೀಲ, ಬಿ.ಎಂ.ಕಂಬಳಿ, ಡಿ.ಬಿ.ಧರೆಗೆನ್ನವರ, ಬಸವರಾಜ ಡೊಳ್ಳಿನ, ಹನಮಂತ ಜೋಗಿನ ಸೇರಿದಂತೆ ಸಮಾಜದ ಮುಖಂಡರು ಹಾಜರಿದ್ದರು.

# ಸರಸ್ ಮೇಳದಲ್ಲಿ ಭಾಗವಹಿಸುವ ಸ್ವ–ಸಹಾಯ ಸಂಘದ ಸದಸ್ಯರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಿ–ಸಿಇಓ ರಾಹುಲ್ ರತ್ನಂ ಪಾಂಡೇಯ





**ಕೊಪ್ಪಳ :** ಜನವರಿ 15 ರಂದು ನಡೆಯುವ ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ನಡೆಯುವ ಸರಸ್ ಮೇಳದಲ್ಲಿ ಭಾಗವಹಿಸುವ ರಾಜ್ಯದ ವಿವಿಧ ಜಿಲ್ಲೆಯ ಸ್ವ– ಸಹಾಯ ಸಂಘದ ಸದಸ್ಯರಿಗೆ ಸೂಕ್ತ ವ್ಯವಸ್ಥೆ ಮಾಡಿಕೊಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಹೇಳಿದರು. ಅವರು ಜಿಲ್ಲಾ ಪಂಚಾಯತ ಸಮಿತಿ ಸಭಾಂಗಣದಲ್ಲಿ ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಅಂಗವಾಗಿ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.
ರಾಜ್ಯದ ವಿವಿಧ 16 ಜಿಲ್ಲೆಗಳಿಂದ ಬರುವ ಸ್ವ– ಸಹಾಯ ಸಂಘದ ಸದಸ್ಯರು ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಮಳಿಗೆಗಳನ್ನು ಹಾಕಿ ಅವರು ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವರು. ಅವರಿಗೆ ಉಳಿದುಕೊಳ್ಳಲು ಸೂಕ್ತ ವಸತಿ ಹಾಗೂ ಊಟೋಪಚಾರದ ವ್ಯವಸ್ಥೆ ಮಾಡಬೇಕು. ಸಮಾಜ ಕಲ್ಯಾಣ ಇಲಾಖೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಅವರಿಗೆ ಉಳಿದುಕೊಳ್ಳಲು ಸೂಕ್ತ ವಸತಿ ವ್ಯವಸ್ಥೆ ಮಾಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.
ಸರಸ್ ಮೇಳದ ಮಳಿಗೆಗಳಿಗೆ ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಸೂಕ್ತ ಜಾಗವನ್ನು ನೀಡಿದ್ದಾರೆ. ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಸೇರಿದಂತೆ ಇತರೆ ವಿವಿಧ ಇಲಾಖೆಯ ಮಳಿಗೆಗಳನ್ನು ಸಹ ಹಾಕಲಾಗುತ್ತದೆ. ನಮ್ಮ ಜಿಲ್ಲೆಯ ಸ್ವ–ಸಹಾಯ ಸಂಘದ ಸದಸ್ಯರಿಗಿಂತ ಬೇರೆ ಜಿಲ್ಲೆಯಿಂದ ಬರುವ ನಮ್ಮ ಅತಿಥಿಗಳಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ತಮ್ಮ ಮೇಲಿದೆ ಎಂದು ಹೇಳಿದರು.
ಕಳೆದ ಸಲ ಸ್ವ–ಸಹಾಯ ಸಂಘದ ಸದಸ್ಯರು ಯಾವ– ಯಾವ ವಸತಿ ನಿಲಯಗಳಲ್ಲಿ ಉಳಿದುಕೊಂಡಿದ್ದರು, ಅಲ್ಲಿ ಅವರಿಗೆ ಇರಲು ವ್ಯವಸ್ಥೆ ಮಾಡಿ ಮತ್ತು ಕಳೆದ ಸಲ ಏನಾದರೂ ಸಮಸ್ಯೆಗಳಾಗಿದ್ದರೆ ಅದು ಈ ಸಲ ಮರುಕಳಿಸಿದಂತೆ ನೋಡಿಕೊಳ್ಳಬೇಕು. ಒಂದು ವಸತಿ ನಿಲಯಗಳಲ್ಲಿ ಎಷ್ಟು ಜನ ಇರಬಹುದು ಎಂಬುದರ ಅಂದಾಜು ಪಟ್ಟಿ ತಯಾರಿಸಿ. ಹಾಗೂ ಸ್ವ. ಸಹಾಯ ಸಂಘದ ಎಲ್ಲಾ ಮಳಿಗೆಗಳಲ್ಲಿ ಕ್ಯೂ–ಆರ್ ಕೋಡ ಉಪಯೋಗಿಸುವಂತೆ ನೋಡಿಕೊಳ್ಳಬೇಕು. ಮತ್ತು ತಮ್ಮ ಯಾವುದೇ ಸಲಹೆ ಸೂಚನೆಗಳಿದ್ದರು ತಿಳಿಸಿ ಎಂದು ಹೇಳಿದರು.
ಸಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಪ್ರಕಾಶ ವಿ., ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಉಕ್ಕುಂದ, ಲೀಡ್ ಬ್ಯಾಂಕ್ ಮ್ಯಾನೇಜರ್ ವೀರೆಂದ್ರಕುಮಾರ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ.ಗವಿಶಂಕರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ನಾಗಮಣಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅಜ್ಮೀರ ಅಲಿ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಸತಿ ನಿಲಯಗಳ ಮೇಲ್ವಿಚಾರಕರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಸರ್ಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷರಾಗಿ ಜಮ್ಮಣ್ಣವರ್ ನೇಮಕ



**ಕೊಪ್ಪಳ :** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಘಟಕಕ್ಕೆ ಹಿರಿಯಉಪಾಧ್ಯಕ್ಷರಾಗಿ ಕೊಪ್ಪಳದ ನಾಗರಾಜ್ ಜುಮ್ಮಣ್ಣವರ್ ನೇಮಕಗೊಂಡಿದ್ದಾರೆ
ಸದರಿಯವರನ್ನು ರಾಜ್ಯ ಘಟಕಕ್ಕೆ ಹಿರಿಯ ಉಪಾಧ್ಯಕ್ಷರನ್ನಾಗಿ ಸಂಘದ ರಾಜ್ಯ ಅಧ್ಯಕ್ಷ ಸಿಎಸ್ ಕ್ಷಡಾಕ್ಷರಿ ಯವರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ, ಸದರಿಯವರು ಕೊಪ್ಪಳ ಜಿಲ್ಲಾ ಅಧ್ಯಕ್ಷರಾಗಿ ಹಾಗೂ ರಾಜ್ಯ ಘಟಕದ ಉಪಾಧ್ಯಕ್ಷರಾಗಿ ಉತ್ತಮ ಸೇವೆ ಸಲ್ಲಿಸಿ ಜನ ಸಾಮಾನ್ಯರ, ಸರ್ಕಾರಿ ನೌಕರ ವರ್ಗದ, ಅಧಿಕಾರಿ, ಸಿಬ್ಬಂದಿ ವರ್ಗದವರ ಪ್ರೀತಿ ವಿಶ್ವಾಸ ಗಳಿಸುವಲ್ಲಿ ಯಶಸ್ವಿಯಾಗಿರುವುದಲ್ಲದೆ ಇವರ ಉತ್ತಮ ಸಂಘಟನೆ ಸೇವೆಯನ್ನು ಪರಿಗಣಿಸಿ ರಾಜ್ಯಾಧ್ಯಕ್ಷರು ಇವರನ್ನು ರಾಜ್ಯ ಘಟಕಕ್ಕೆ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿ ಕೊಂಡಿದ್ದಾರೆ ಇವರ ನೇಮಕದಿಂದ ಕೊಪ್ಪಳ ಜಿಲ್ಲೆಯ ಸರ್ಕಾರಿ ನೌಕರ ಸಂಘದ ಪದಾಧಿಕಾರಿಗಳು ಸದಸ್ಯರು ಸರ್ಕಾರಿ ನೌಕರರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ನಾಗರಾ ಜಜುಮ್ಮನ್ನವರವರಿಗೆ ಒಲಿದ ರಾಜ್ಯ ಹಿರಿಯ ಉಪಾಧ್ಯಕ್ಷ ಪಟ್ಟ



**ಕೊಪ್ಪಳ :** ಸರಕಾರಿ ನೌಕರರ ಸಂಘದ ಕೊಪ್ಪಳ ಜಿಲ್ಲಾ ಘಟಕಕ್ಕೆ ಸತತ ಮೂರನೇ ಬಾರಿ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ನಾಗರಾಜ ಜುಮ್ಮನ್ನವರಿಗೆ ಸರಕಾರಿ ನೌಕರರ ಸಂಘದ ರಾಜ್ಯ ಹಿರಿಯ ಉಪಾಧ್ಯಕ್ಷರ ಹುದ್ದೆ ಲಭಿಸಿದೆ.
ಬುಧವಾರ ಬೆಂಗಳೂರು ನಗರದ ಕಬ್ಬನ ಉದ್ಯಾನವನದ ಸರಕಾರಿ ನೌಕರರ ಭವನದಲ್ಲಿ ಸರಕಾರಿ ನೌಕರರ ಸಂಘದರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಕ್ಷರಿ ಅವರು ನಾಗರಾಜಜುಮ್ಮನ್ನವರ ಹಿರಿತನವನ್ನು ಹಾಗೂ ಕಳೆದ 22 ವರ್ಷಗಳಿಂದ ಅತ್ಯಂತ ಕ್ರಿಯಾಶೀಲವಾಗಿ ನೌಕರರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿರುವದನ್ನು ಮನಗಂಡುಸರಕಾರಿ ನೌಕರರ ಸಂಘದರಾಜ್ಯ ಹಿರಿಯಉಪಾಧ್ಯಕ್ಷರ ಹುದ್ದೆಯನ್ನು ನೀಡುವ ಮೂಲಕ ಸಂಘಟನೆಗೆ ಶ್ರಮವಹಿಸಿದ ನಾಯಕರನ್ನು ಗುರುತಿಸಿದಂತೆ ಆಗಿದೆ.
ಈ ಸಮಯದಲ್ಲಿ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಕ್ಷರಿ, ಗೌರವಾಧ್ಯಕ್ಷರಾದ ಎಸ್.ಬಸರಾಜ, ಕಾರ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಬಳ್ಳಾರಿ, ಪ್ರಧಾನ ಕಾರ್ಯದರ್ಶಿ ಗಿರಿಗೌಡ್ರು, ಜಿಲ್ಲಾ ಕಾರ್ಯದರ್ಶಿಯಾದ ಶಿವಪ್ಪ ಜೋಗಿ, ವಿಕಲಚೇತನ ನೌಕರರ ಸಂಘದರಾಜ್ಯಾಧ್ಯಕ್ಷರಾದ ಬೀರಪ್ಪ ಅಂಡಗಿ, ನೌಕರರ ಸಂಘದ ನಿರ್ದೇಶಕರಾದ ಬಾಳಪ್ಪ ಕಾಳೆ, ಸಂಜೀವ, ಸುರೇಶ ಮೋರಗೇರಿ, ಕಾಶಪ್ಪ ಹಳ್ಳಿ, ಸುನೀಲ್,ವೆಂಕಟೇಶಕುಲಕರ್ಣಿ,ನಾಗ 'ರಾಜ ಕುಷ್ಟಗಿ,ಶ್ರೀನಿವಾಸ ಜನಾದ್ರಿಮುಂತಾದವರು ಹಾಜರಿದ್ದರು.

# ಏಡ್ಸ್ ರೋಗಿಗಳಿಗೆ ಧೈರ್ಯ ತುಂಬೋಣ: ಡಾ. ಸವಡಿ

**ಗಂಗಾವತಿ :** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಹಾಗೂ ಜಿಲ್ಲಾ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕೊಪ್ಪಳ ಮತ್ತು ಉಪವಿಭಾಗ ಆಸ್ಪತ್ರೆ ಗಂಗಾವತಿ ಇವರ ಸಂಯೋಗದಲ್ಲಿ ಆಸ್ಪತ್ರೆ ಆವರಣದಲ್ಲಿ ವಿಶ್ವ ಏಡ್ಸ್ ದಿನಾಚರಣೆಗೆ ಚಾಲನೆ ನೀಡಲಾಯಿತು.
ನಂತರ ಮಾತನಾಡಿದ ಉಪವಿಭಾಗ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿಗಳಾದ ಡಾ.ಈಶ್ವರ ಶಿ,ಸವಡಿ ಏಡ್ಸ್ ರೋಗಿಗಳಿಗೆ ಧೈರ್ಯ ತುಂಭೋಣಈಬಗ್ಗೆಜಾಗೃತಿಮೂಡಿಸೋಣ ಇಂದು ವಿಶ್ವ ಏಡ್ಸ್ ದಿನ. ಹಲವರ ಜೀವ ಬಲಿ ಪಡೆದಿರುವ ಈ ರೋಗದ ವಿರುದ್ಧ ಜಾಗೃತಿ ಮೂಡಿಸಬೇಕಾಗಿರುವುದು ಬಹಳ ಅಗತ್ಯ. ಸೂಕ್ತ ಶಿಕ್ಷಣ ಮತ್ತು ಜಾಗೃತಿಯಿಂದ ಈ ರೋಗದ ವಿರುದ್ಧದ ಹೋರಾಟಕ್ಕೆ ಇನ್ನಷ್ಟು ಬಲ ತರಲು ಸಾಧ್ಯ ಏಡ್ಸ್ ಹೀಗೆಂದ ತಕ್ಷಣ ಎಲ್ಲರೂ ಬೆಚ್ಚಿಬೀಳುತ್ತಾರೆ. ಸುಮಾರು ನಾಲ್ಕು ದಶಕಗಳಿಂದ ಹೆಚ್‌ಐವಿ/ ಏಡ್ಸ್ ಪ್ರಪಂಚದಾದ್ಯಂತ ಗಂಭೀರವಾದ ಆರೋಗ್ಯ ಸಮಸ್ಯೆಯಾಗಿ ಪರಿಣಮಿಸಿದೆ. ಇಷ್ಟು ವರ್ಷದಲ್ಲಿ ಸಾಕಷ್ಟು ಮಂದಿ ಈ ಕಾಯಿಲೆಗೆ ಬಲಿಯಾಗಿದ್ದಾರೆ.
ಗಂಗಾವತಿ ತಾಲೂಕಿನಲ್ಲಿರುವ 3 ಸಾವಿರ ಏಡ್ಸ್ ರೋಗಿಗಳು ಇದ್ದಾರೆ,ನಮ್ಮ ಸರ್ಕಾರಿ ಆಸ್ಪತ್ರೆಯಲ್ಲಿ ಈ ತಿಂಗಳಲ್ಲಿ ಐದು ಜನ ಏಡ್ಸ್ ಇದ್ದ ಮಹಿಳೆಯರಿಗೆ ಡಿಲೇವರಿ ಮಾಡಲಾಯಿತು ಹಾಗೂ ಜತೆಗೆ, ಈ ರೋಗ ಮತ್ತು ರೋಗಿಗಳ ಬಗ್ಗೆ ಒಂದಷ್ಟು ತಪ್ಪು ತಿಳುವಳಿಕೆಗಳೂ ಇವೆ. ಇಂತಹ ತಪ್ಪು ತಿಳುವಳಿಕೆಗಳನ್ನು ದೂರ ಮಾಡಿ ಏಡ್ಸ್ ರೋಗಿಗಳಿಗೆ ಧೈರ್ಯ ತುಂಬುವ, ಈ ಹೋರಾಟದಲ್ಲಿ ಅವರಿಗೆ ಬಲವಾಗಿ ನಿಲ್ಲುವುದು ಕೂಡಾ ಎಲ್ಲರ ಜವಾಬ್ದಾರಿ. ಆಗ ಮಾತ್ರ ಏಡ್ಸ್ ವಿರುದ್ಧದ ಹೋರಾಟಕ್ಕೆ ಇನ್ನಷ್ಟು ಬಲ ಬರುವುದರಲ್ಲಿ ಸಂಶಯವೇ ಇಲ್ಲ ಉಪವಿಭಾಗ ಆಸ್ಪತ್ರೆಯಿಂದ ಬ್ಯಾಂಡ್ ಮೇಳ ಕೋಲಾಟ ಕಲಾತಂಡ ಹೆಜ್ಜೆ ಮೇಳದೊಂದಿಗೆ ಬಸವಣ್ಣ ಸರ್ಕಲ್,ಮಲ್ಲಿಕಾರ್ಜುನ ಮಠ ಬಸ್ಟ್ಯಾಂಡ ಶ್ರೀ ಕೃಷ್ಣ ದೇವರಾಯ ಸರ್ಕಲ್ ನಲ್ಲಿ ಜಾಥಾ ಮುಕ್ತಾಯಗೊಳ್ಳುವುದು ಎಂದರು.
ಗಂಗಾವತಿ ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ ಪಾಟೀಲ್ ಮಾತನಾಡಿ ಶಿಕ್ಷಣ ಮತ್ತು ಸೂಕ್ತ ಜಾಗೃತಿಯಿಂದ ಮಾತ್ರ ಏಡ್ಸ್ ಬಗೆಗಿನ ಸಂದೇಹ, ತಪ್ಪು ತಿಳುವಳಿಕೆಯನ್ನು ದೂರ ಮಾಡಲು ಸಾಧ್ಯ. ಜತೆಗೆ, ಈ ಕಾಯಿಲೆಯಿಂದ ಬಳಲುತ್ತಿರುವವರಿಗೆ ಪ್ರೀತಿ ತೋರಿ ಈ ಹೋರಾಟದಲ್ಲಿ ಅವರಿಗೆ ಧೈರ್ಯ ತುಂಬುವ, ಮಾನಸಿಕವಾಗಿ ಕುಗ್ಗದಂತೆ ಮಾಡುವ ಕೆಲಸವನ್ನೂ ಎಲ್ಲರೂ ಮಾಡಬೇಕಾಗಿದೆ.
ಇಂತಹ ಜಾಗೃತಿಗೆ ಇದು ಸಕಾಲವಾಗಿದೆ. ಇದೇ ಉದ್ದೇಶದಿಂದ ಡಿಸೆಂಬರ್ 1 ರಂದು ವಿಶ್ವ ಏಡ್ಸ್ ದಿನವನ್ನು ಆಚರಣೆ ಮಾಡಲಾಗುತ್ತದೆ. ಏಡ್ಸ್‌ನಿಂದ ಬಳಲುತ್ತಿರುವವರು ಎದುರಿಸುತ್ತಿರುವ ಕಳಂಕ, ತಾರತಮ್ಯದ ಭಾವನೆಯನ್ನು ದೂರ ಮಾಡಿ ಒಗ್ಗಟ್ಟಾಗಿ ಏಡ್ಸ್ ಮುಕ್ತ ಸಮಾಜದ ನಿರ್ಮಾಣ ಮಾಡುವ ಸಲುವಾಗಿ ಈ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ 'ಅಸಮಾನತೆಗಳನ್ನು ದೂರವಾಗಿಸಿ, ಏಡ್ಸ್ ಅನ್ನು ಕೊನೆಗೊಳಿಸಿ' ಘೋಷವಾಕ್ಯದಿಂದ ಏಡ್ಸ್ ದಿನವನ್ನು ಆಚರಣೆ ಮಾಡಲಾಗುತ್ತಿದೆ. ಈ ದಿನದಂದು ಹಂಚಿಕೊಳ್ಳುವ ಸಂದೇಶಗಳು ಇಲ್ಲಿವೆ. ಏಡ್ಸ್‌ನಿಂದ ಈಗಾಗಲೇ ಸಾಕಷ್ಟು ಜನ ಪ್ರಾಣ ಕಳೆದುಕೊಂಡಿದ್ದಾರೆ. ಹೀಗಾಗಿ, ಶಿಕ್ಷಣ ಮತ್ತು ರೋಗದ ಬಗ್ಗೆ ಸಮರ್ಥ ಜಾಗೃತಿಯಿಂದ ನಾವು ಈ ಕಾಯಿಲೆಯನ್ನು ದೂರ ಮಾಡಬಹುದು ಎಂದು ಸಾರ್ವಜನಿಕರಿಗೆ ಇಂತಹ ಜಾಗೃತಿಗೆ ಇದು ಸಕಾಲ. ಏಡ್ಸನ್ನು ಈ ಪ್ರಪಂಚದಿಂದ ದೂರ ಮಾಡಲು ಒಗ್ಗಟ್ಟಾಗಿ ಪ್ರಯತ್ನಿಸೋಣ. ಏಡ್ಸ್‌ನಿಂದ ಪ್ರೀತಿ ನೀಡೋಣ, ಈ ಕಾಯಿಲೆ ವಿರುದ್ಧದ ಹೋರಾಟಕ್ಕೆ ಬಲ ತುಂಬೋಣ ಎಂದು ಸಲಹೆ ನೀಡಿದರು.
ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಮೌಲಾಸಾಬ, ನಗರ ಯೋಜನಾ ಪ್ರಾದಧಿಕಾರ ಅಧ್ಯಕ್ಷ ಸೈಯದ್ ಖಾದ್ರಿ,ಗಂಗಾವತಿ ನಗರ ಪೋಲೀಸ್ ಠಾಣೆ ಪಿಐ ಪ್ರಕಾಶ ಮಾಳಿ,ಆರೋಗ್ಯ ರಕ್ಷಾ ಸಮಿತಿ ಸದಸ್ಯರಾದ ಮಲ್ಲಿಕಾರ್ಜುನ ತಟ್ಟಿ, ಹೊನ್ನೂರುಸಾಬ,ಚಂದ್ರಶೇಖರ, ಶರಣಪ್ಪ, ಡಾ. ರವೀಂದ್ರನಾಥ, ಡಾ.ನಂದಕುಮಾರ, ತಾಲೂಕು ವೈದ್ಯಾಧಿಕಾರಿಗಳಾದ ಡಾ. ಗೌರಿ ಶಂಕರ್, ಡಾ. ನಾಗರಾಜ್ ಡಾ. ಮಲ್ಲಿಕಾರ್ಜುನ ನರ್ಸಿಂಗ್ ಹೋಮ್,ಡಾ. ಮೇಧಾ ಡಾ.ಮಲ್ಲನಗೌಡ, ಎ ಎಸ್ ಎನ್ ರಾಜು,ಡಾ. ಸತೀಶ್ ರಾಯ್ಕರ್, ಡಾ.ಬಸವರಾಜ ಅಯ್ಯೋದ್ಯ, ಡಾ.ಸುನೀಲ್ ಅರಳಿ, ಸಾದಿಯ,ಡಾ.ಶರಣ ಬಸವ,ಡಾ. ಅಬಿದಾ ಹುಸೇನ್, ವಿಜಯಗೌಡ, ಗುರುರಾಜ ಉಮಚಗಿ, ಆಶಾ ಕಾರ್ಯಕರ್ತೆ ಸೇರಿದಂತೆ ಇತರರು ಇದ್ದರು.

# ಮುಷ್ಕರದಲ್ಲಿ ಭಾಗವಹಿಸಿದ ಆಶಾ ಕಾರ್ಯಕರ್ತೆಯರು ಮರಳಿ ಕರ್ತವ್ಯಕ್ಕೆ ಹಾಜರಾಗಿ: ಡಾ.ಲಿಂಗರಾಜು

**ಕೊಪ್ಪಳ :** ಮುಷ್ಕರದಲ್ಲಿ ಭಾಗವಹಿಸಿದ ಕೊಪ್ಪಳ ಜಿಲ್ಲೆಯ ಆಶಾ ಕಾರ್ಯಕರ್ತೆಯರು ಮರಳಿ ಕರ್ತವ್ಯಕ್ಕೆ ಹಾಜರಾಗುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಲಿಂಗರಾಜು ಟಿ ಅವರು ತಿಳಿಸಿದ್ದಾರೆ.
ಜನವರಿ 7 ರಿಂದ ರಾಜ್ಯ ಮಟ್ಟದಲ್ಲಿ ಆಶಾ ಕಾರ್ಯಕರ್ತೆಯರ ಮುಷ್ಕರ ನಡೆಯುತ್ತಿದ್ದು, ಈ ಮುಷ್ಕರದಲ್ಲಿ ಜಿಲ್ಲೆಯಿಂದ ಆಶಾ ಕಾರ್ಯಕರ್ತೆಯರು ಭಾಗವಹಿಸಿರುತ್ತಾರೆ. ಈಗಾಗಲೆ ಆರೋಗ್ಯ ಸಚಿವರು ತಮ್ಮ ಎಲ್ಲಾ ಬೇಡಿಕೆಗಳನ್ನು ಸಹಾನುಭೂತಿಯಿಂದ ಪರಿಶೀಲಿಸುವುದಾಗಿ ತಿಳಿಸಿದ್ದು, ಸಾರ್ವಜನಿಕ ಆರೋಗ್ಯ ಹಿತ ದೃಷ್ಟಿಯಿಂದ ಮುಷ್ಕರದಲ್ಲಿ ಭಾಗವಹಿಸಿದ ಆಶಾ ಕಾರ್ಯಕರ್ತೆಯರು ಈ ಕೂಡಲೆ ಕರ್ತವ್ಯಕ್ಕೆ ಹಾಜರಾಗುವಂತೆ ಈ ಮೂಲಕ ಸೂಚಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ರಾಜ್ಯ ಪ್ರಶಸ್ತಿಗೆ ಶಿಕ್ಷಕ ಸಂತೋಷ ಬಂಡೆ ಆಯ್ಕೆ

**ವಿಜಯಪುರ** : ಬೆಂಗಳೂರಿನ ಶಿಕ್ಷಣ ಜ್ಞಾನ ಮಾಸಪತ್ರಿಕೆಯ 22ನೇ ವಾರ್ಷಿಕೋತ್ಸವದ ನಿಮಿತ್ತ 2024-25 ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನಗೈದ ಸಾಧಕರಿಗೆ ಕೊಡಮಾಡುವ 'ರಾಜ್ಯ ಮಟ್ಟದ ಬಹುಮುಖ ಶಿಕ್ಷಕ ಪ್ರತಿಭೆ ರತ್ನ' ಪ್ರಶಸ್ತಿಗೆ ಇಂಡಿ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯ ಇಂಗ್ಲೀಷ್ ಶಿಕ್ಷಕ ಸಂತೋಷ ಬಂಡೆ ಅವರು ಆಯ್ಕೆಯಾಗಿದ್ದಾರೆ.



ಶಿಕ್ಷಕ ಸಂತೋಷ ಬಂಡೆ ಅವರ ಶೈಕ್ಷಣಿಕ, ಸಾಹಿತ್ಯಿಕ, ಸಾಮಾಜಿಕ, ಸಾಂಸ್ಕೃತಿಕ, ಧಾರ್ಮಿಕ ಹಾಗೂ ಅನೇಕ ವಿಭಾಗಗಳಲ್ಲಿ ಮಾಡಿದ ಸಾಧನೆಯನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಅರಳಿ ನಾಗರಾಜ ಸೇರಿದಂತೆ ಅನೇಕ ಗಣ್ಯರು ಬೀಳಗಿಯಲ್ಲಿ ಜರುಗುವ 'ರಾಜ್ಯ ಮಟ್ಟದ ಶೈಕ್ಷಣಿಕ ಸಮಾವೇಶ'ದಲ್ಲಿ ಪ್ರಶಸ್ತಿ ಪ್ರದಾನ ಮಾಡುವರು ಎಂದು ಸಂಪಾದಕ ಎಸ್ ವ್ಹಿ ನಾಗರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಅಂಕ ಗಳಿಸುವಲ್ಲಿ ಶಿಕ್ಷಕರ ಪಾತ್ರ ಮುಖ್ಯ: ಸಂಗಮೇಶ ಬಬಲೇಶ್ವರ

**ವಿಜಯಪುರ** : ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಅಂಕ ಗಳಿಸುವಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿರುತ್ತದೆ ಎಂದು ಧಾರವಾಡದ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಹೇಳಿದರು.

ರಾಜ್ಯ ಬಾಲವಿಕಾಸ ಅಕಾಡೆಮಿ, ಧಾರವಾಡ, ಜಿಲ್ಲಾಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಂಯುಕ್ತಾಶ್ರಯದಲ್ಲಿ ನಗರದ ಶಿವಶರಣ ಶ್ರೀ ಹೇಮರಡ್ಡಿ ಮಲ್ಲಮ್ಮ ಮಂಗಲ ಕಾರ್ಯಾಲಯದಲ್ಲಿ ಬುಧವಾರದಂದು ಆಯೋಜಿಸಿದ ಎಸ್.ಎಸ್.ಎಲ್.ಸಿ ಮಾರ್ಗದರ್ಶಿ ಸಾಹಿತ್ಯ ಪುಸ್ತಕ ವಿತರಣಾ ಸಮಾರಂಭ ಹಾಗೂ ಜಿಲ್ಲಾ ಮಟ್ಟದ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣಾ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಬಾಲ ಮಂದಿರದಲ್ಲಿರುವ ಮಕ್ಕಳು ಬೀದಿ ಬದಿಯಲ್ಲಿ ಚಿಂದಿ ಆಯುವ, ಬಡ ಕೂಲಿಕಾರ್ಮಿಕರ ಮಕ್ಕಳು ಇಂತಹ ಮಕ್ಕಳ ಶಿಕ್ಷಣಕ್ಕಾಗಿ ಶಿಕ್ಷಕರು ಶ್ರಮಿಸಬೇಕು. ಈ ನಿಟ್ಟಿನಲ್ಲಿ 4 ಜಿಲ್ಲೆಗಳಲ್ಲಿ



ಮಾರ್ಗದರ್ಶಿ ಸಾಹಿತ್ಯ ಪುಸ್ತಕಗಳನ್ನು ವಿತರಿಸಲಾಗುವುದು ಎಂದರು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸುವ ನಿಟ್ಟಿನಲ್ಲಿ ಅವರಿಗೆ ಸರಿಯಾದ ಮಾರ್ಗದರ್ಶನ, ಪರಿಪೂರ್ಣ ಜ್ಞಾನ ನೀಡುವ ಉದ್ದೇಶದಿಂದ ರಚಿಸಲಾಗಿರುವ ಮಾರ್ಗದರ್ಶಿ ಸಾಹಿತ್ಯ ಪುಸ್ತಕವನ್ನು ಶಿಕ್ಷಕರು ಬಳಸಿಕೊಳ್ಳಬೇಕೆಂದು ತಿಳಿಸಿದರು. ವಿದ್ಯಾಭ್ಯಾಸದ ಮೈಲಿಗಲಾಗಿರುವ ಎಸ್.ಎಸ್.ಎಲ್.ಸಿಯಲ್ಲಿ ಉತ್ತಮ ಪ್ರಗತಿ ಸಾಧಿಸಿದರೆ ಮುಂದಿನ ವಿದ್ಯಾಭ್ಯಾಸದ ಪಯಣ ಸುಗಮವಾಗಿರುತ್ತದೆ.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಮಾತನಾಡಿ ಅಭ್ಯಾಸ ಹಾಗೂ ಪುನರಮನನವು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಮುಖ್ಯ ಪಾತ್ರವಾಗಿರುತ್ತದೆ.

ಈ ಸಲ ಎಸ್.ಎಸ್.ಎಲ್.ಸಿ ಉತ್ತಮ ಫಲಿತಾಂಶ ಗಳಿಸಲು ಪೂರ್ವಭಾವಿ ಪರೀಕ್ಷೆಯನ್ನು ಮುಖ್ಯ ಪರೀಕ್ಷೆ ಮಾದರಿಯಲ್ಲಿಯೇ ಮಾಡಬೇಕು. ಕ್ಯಾಮರಾ, ಅಂತರಜಾಲ ವ್ಯವಸ್ಥೆ, ಯುಪಿಎಸ್ ವ್ಯವಸ್ಥೆ ಮಾಡಬೇಕು. ಅನಿಮಿಯಾ ಮುಕ್ತ ವಿಜಯಪುರ ಅಭಿಯಾನದಡಿ ವಿದ್ಯಾರ್ಥಿಗಳಿಗೆ Folic Acid, ಕಬ್ಬಿಣಾಂಶಯುಕ್ತ ಟ್ಯಾಬ್ಲೆಟ್‌ಗಳನ್ನು ಕೊಡಬೇಕು. 20 ಅಂಶಗಳ ಕಾರ್ಯಕ್ರಮದ ಅನಿಷ್ಠಾನಕ್ಕಾಗಿ ಶಿಕ್ಷಕರ-ಪೋಷಕರ ಸಭೆ ನಡೆಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರದ ಬಿಇಓ ಬಸವರಾಜ ತಳವಾರ, ಚಾಣಕ್ಯ ಕರಿಯರ್ ಅಕಾಡೆಮಿ ಅಧ್ಯಕ್ಷ ಎನ್.ಎಂ.ಬಿರಾದಾರ, ಎಕ್ಸಲಂಟ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಬಸವರಾಜ ಕೌಲಗಿ, ಡಿಡಿಪಿಐ ಟಿ.ಎಸ್.ಕೋಲಾರ(ಆಡಳಿತ), ಡಿಡಿಪಿಐ ಉಮಾದೇವಿ ಸೊನ್ನದ, ಬಿಇಓಗಳಾದ ಸುಜಾತಾ ಹುನೂರ, ಪ್ರಮೋದಿನಿ ಬಳೋಲ ಮಟ್ಟಿ, ಶ್ರೀ ಆಲಗೂರ, ಎಂ.ಬಿ.ಯಡ್ರಾಮಿ, ಬಸವರಾಜ ಸಾವಳಗಿ, ಶಿಕ್ಷಣಾಧಿಕಾರಿ ಅಶೋಕ ಲಿಮಕರ, ಎಲ್.ಎಸ್.ಬಿರಾದಾರ ಹಾಗೂ ಇತರರು ಉಪಸ್ಥಿತರಿದ್ದರು.

# ಕೊಲೆ ಯತ್ನದ ಆರೋಪಿಗೆ 12 ವರ್ಷ ಶಿಕ್ಷೆ, 68 ಸಾವಿರ ರೂ. ದಂಡ

**ವಿಜಯಪುರ** : ಕೊಲೆ ಯತ್ನ ಪ್ರಕರಣದ ಆರೋಪಿಗೆ 4 ನೇ ಹೆಚ್ಚುವರಿ ಸತ್ರ ನ್ಯಾಯಾಲಯ 12 ವರ್ಷ ಶಿಕ್ಷೆ ಹಾಗೂ 68 ಸಾವಿರ ರೂ.ದಂಡ ವಿಧಿಸಿ ತೀರ್ಪು ನೀಡಿದೆ.

ಇಲ್ಲಿನ ಖಾಜಾ ನಗರದ ಮಹಮ್ಮದ್ ಇಬ್ರಾಹಿಮ್ ಉಕ್ಕಲಿ ಶಿಕ್ಷೆಗೊಳಗಾದ ಆರೋಪಿ.

ಮಹಮ್ಮದ್ ಇಬ್ರಾಹಿಮ್ ಉಕ್ಕಲಿ ಈತ ಕೊಲೆಗೆ ಯತ್ನ ನಡೆಸಿರುವ ಬಗ್ಗೆ ಇಲ್ಲಿನ ಗಾಂಧಿಚೌಕ್ ಪೊಲೀಸ್ ಠಾಣೆ ಪ್ರಕರಣ ಪ್ರಕರಣ ದಾಖಲಾಗಿತ್ತು, ಈ ಸಂಬಂಧ ಪಿಎಸ್ ಐ ಆರೀಫ್ ಮುಶಾಪೂರಿ, ಪ್ರಕರಣದ ತನಿಖೆ ಕೈಕೊಂಡು,

ಇದರಲ್ಲಿ ಆರೋಪಿತನಾದ ಮಹಮ್ಮದ ಇಬ್ರಾಹಿಮ್ ಉಕ್ಕಲಿ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಈ ಪ್ರಕರಣದ ವಾದ, ಪ್ರತಿವಾದ ಆಲಿಸಿದ 4ನೇ ಹೆಚ್ಚುವರಿ ಸತ್ರ ನ್ಯಾಯಾಲಯ, ಆರೋಪಿ ಮಹಮ್ಮದ್ ಇಬ್ರಾಹಿಮ್ ಉಕ್ಕಲಿ ಈತನಿಗೆ ಒಟ್ಟು 12 ವರ್ಷ ಶಿಕ್ಷೆ ಮತ್ತು 68 ಸಾವಿರ ರೂ.ಗಳ ದಂಡವನ್ನು ವಿಧಿಸಿದ್ದು, ದಂಡ ಭರಿಸದೇ ಇದ್ದಲ್ಲಿ ಹೆಚ್ಚುವರಿಯಾಗಿ 3 ವರ್ಷ ಕಠಿಣ ಶಿಕ್ಷೆ ವಿಧಿಸಿ ಆದೇಶ ಹೊರಡಿಸಿದೆ.

ಈ ಪ್ರಕರಣದಲ್ಲಿ ಅಭಿಯೋಜನೆ ಪರವಾಗಿ ಸರ್ಕಾರಿ ಅಭಿಯೋಜಕ ವಿರೇಶ ಮಹಾಮನಿ ವಾದ ಮಂಡಿಸಿದ್ದಾರೆ.

# ಶಿವಯೋಗಿ ಸಿದ್ಧರಾಮೇಶ್ವರ, ಮಹಾಯೋಗಿ ವೇಮನ, ಅಂಬಿಗರ ಚೌಡಯ್ಯ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

**ವಿಜಯಪುರ** : ಜಿಲ್ಲಾಡಳಿತ ವತಿಯಿಂದ ಇದೇ ಜನವರಿ 14ರಂದು ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ, ಜ.19ರಂದು ಮಹಾಯೋಗಿ ವೇಮನ ಜಯಂತಿ ಹಾಗೂ ಜ.21ರಂದು ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮಗಳನ್ನು ಅತ್ಯಂತ ಅರ್ಥಪೂರ್ಣ ಹಾಗೂ ವ್ಯವಸ್ಥಿತವಾಗಿ ಆಚರಿಸಲು ನಿರ್ಧರಿಸಲಾಯಿತು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರ ಅಧ್ಯಕ್ಷತೆಯಲ್ಲಿಜರುಗಿದಸಭೆಯಲ್ಲಿ,ಜನವರಿ 14ರಂದು ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಹಾಗೂ ಜ.19ರಂದು ಜಯಂತಿ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮಗಳನ್ನು ನಗರದ ಶ್ರೀ ಸಿದ್ಧೇಶ್ವರ ದೇವಸ್ಥಾನದಿಂದ ಮಹನೀಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರೊಂದಿಗೆ ಕಾರ್ಯಕ್ರಮವನ್ನುನಗರದ ರಂಗಮಂದಿರ ದಲ್ಲಿ ಆಯೋಜಿಸಲಾಗಿದೆ. ಬೆಳಿಗ್ಗೆ 10




ಘಂಟೆಗೆ ಸಿದ್ದೇಶ್ವರ ದೇವಸ್ಥಾನದಿಂದ ರಂಗಮಂದಿರದವರೆಗೆ ಮೆರವಣಿಗೆ ಆಯೋಜನೆಮಾಡಲಾಗಿದೆ.ನಂತರವೇದಿಕೆ ಕಾರ್ಯಕ್ರಮ ಮಾಡುವ ಮೂಲಕ ಅವರ ವಿಚಾರಧಾರೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಉಪನ್ಯಾಸ ಸಂಗೀತ ಕಾರ್ಯಕ್ರಮ ಏರ್ಪಡಿಸಲು ನಿರ್ಧರಿಸಲಾಯಿತು.

ಜಿಲ್ಲಾಡಳಿತದಿಂದ ಆಚರಿಸಲಾಗುವ ಈ ಎಲ್ಲ ಮಹನಿಯರ ಜಯಂತಿ ದಿನಗಳಂದು, ಜಯಂತಿ ಕಾರ್ಯಕ್ರಮ ಹಾಗೂ ಮೆರವಣಿಗೆ ಕಾರ್ಯಕ್ರಮ ನಡೆಯುವ ಸ್ಥಳಗಳಲ್ಲಿ ಸ್ವಚ್ಛತೆ, ಸಮರ್ಪಕ ವಿದ್ಯುತ್ ವ್ಯವಸ್ಥೆ, ವೇದಿಕೆ ಕಾರ್ಯಕ್ರಮದಲ್ಲಿ ಆಸನಗಳ ವ್ಯವಸ್ಥೆ, ಆಹ್ವಾನ ಪತ್ರಿಕೆ ಮುದ್ರಣ, ಶಿಷ್ಠಾಚಾರದಂತೆ ಜಯಂತಿಗಳಿಗೆ ಆಹ್ವಾನ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ಜ.21ರಂದು ಅಂಬಿಗರ ಚೌಡಯ್ಯ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ ಬೆಳಿಗ್ಗೆ 10.00ಕ್ಕೆ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮೂಲಕ ಅತ್ಯಂತ ಸರಳ ಹಾಗೂ ಅಚ್ಚುಕಟ್ಟಾಗಿ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಯಿತು.

ಸಭೆಯಲ್ಲಿಜಿ.ಪಂಸಹಾಯಕಕಾರ್ಯದರ್ಶಿ ಅನುಸೂಯಾ ಚಲವಾದಿ, ಡಿ.ವೈ.ಎಸ್.ಪಿ ಬಸವರಾಜ ಎಲಿಗಾಗರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಸಂತೋಷಭೋವಿ, ಸಮಾಜದ ಮುಖಂಡರಾದ ವಿ.ಸಿ.ನಾಗಠಾಣ, ರಾಮು ಹೊಸಪೇಟೆ, ಕೆ.ವಾಯ್. ಆಲಕುಂಟೆ, ಅಡಿವೆಪ್ಪ ಸಾಲಗಲ್ಲ, ಮಾರುತಿ ಚವ್ಹಾಣ, ಬಸವರಾಜ ನೇಗಿನಾಳ, ಸುರೇಶ ಶಿಂಗೆ, ಎಚ್.ಆರ್.ಮಾಚಪ್ಪನವರ,ಕೆ.ಬಿ.ಪಾಟೀಲ್ ಸೋಮನಗೌಡ ಕಲ್ಲೂರ, ವಿದ್ಯಾವತಿ ಅಂಕಲಗಿ,ರಾಮುಹೊಸಪೇಟೆ,ಎಚ್.ಆರ್. ಮಚಪ್ಪನವರ, ಕೆ.ಬಿ. ಪಾಟೀಲ, ಎಸ್.ಎಲ್. ಜೀರಗಾಳ, ಎ.ಎಚ್ ಮಲಘಾಣ,ಎಸ್.ಬಿ. ಹರನಾಳ, ಬಾಬುಗೌಡ ಬಿರಾದಾರ, ಭರತ ಕೋಳಿ, ದೇವೇಂದ್ರ ಮೇರೇಕರ್, ಭೀಮರಾಯ ಜಿಗಜಿಣಗಿ, ಗಿರೀಶ್ ಕುಲಕರ್ಣಿ, ಸಾಹೇಬಗೌಡ ಬಿರಾದಾರ, ಶಿವಾನಂದ ಅಂಬಿಗೇರ,ಪರಶುರಾಮ ಅಳಗುಂಡಗಿ, ಅಶೋಕ ಅಂಬಿಗೇರ, ಹನಮಂತ ನಾಯ್ಕೋಡಿ, ಗುರುನಾಥ ವಾಲಿಕಾರ, ಪ್ರವೀಣ ಗಣಿ, ಸಂತೋಷ ತಟಗಾರ, ಮಹಾದೇವ ಗದ್ಯಾಳ, ಇತರರು ಉಪಸ್ಥಿತರಿದ್ದರು.

# ಆಶಾ ಕಾರ್ಯಕರ್ತೆಯರ ಬೇಡಿಕೆಗಳಿಗೆ ಸ್ಪಂದಿಸಲು ಶಾಸಕ ಯತ್ನಾಳ ಒತ್ತಾಯ


**ವಿಜಯಪುರ** : ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಆಶಾ ಕಾರ್ಯಕರ್ತೆಯರು ಮೈ ಕೊರೆಯುವ ಚಳಿಯಲ್ಲಿ ಪ್ರತಿಭಟನೆ ಮಾಡುತ್ತಿದ್ದರೂ, ಸರ್ಕಾರದ ಯಾವುದೇ ಪ್ರತಿನಿಧಿ ಅವರ ಬಳಿ ಹೋಗದೆ ಇರುವುದು ನಿಜಕ್ಕೂ ಅವಮಾನವೀಯವಾದದ್ದು ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕಿಡಿಕಾರಿದ್ದಾರೆ.

ಆಶಾ ಕಾರ್ಯಕರ್ತೆಯರು ಮೂಲಭೂತ ಆರೋಗ್ಯ ಸೇವೆಗಳನ್ನು ತಲುಪಿಸಲು, ಆರೋಗ್ಯ ಜಾಗೃತಿಯನ್ನು ಉತ್ತೇಜಿಸುವ ಮಹತ್ತರವಾದ ಪಾತ್ರವನ್ನು ವಹಿಸುತ್ತಾರೆ. ಸುರಕ್ಷಿತ ಹೆರಿಗೆ, ಆರೋಗ್ಯವಂತ ಶಿಶುವಿನ ಜನನ, ಆರೈಕೆ ಹಾಗೂ ಪೌಷ್ಟಿಕತೆಯ ಅರಿವು ಮೂಡಿಸುವುದಲ್ಲದೆ ಕ್ಷಯ, ಮಲೇರಿಯಾ, ಡೆಂಗೀ, ಮತ್ತಿತರ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಅವಿರತ ಶ್ರಮಿಸುತ್ತಿದ್ದಾರೆ.

ಚುನಾವಣಾ ಪೂರ್ವದಲ್ಲಿ ಆಶಾ ಕಾರ್ಯಕರ್ತೆಯರ ಸಂಬಳವನ್ನು ರೂ.15 ಸಾವಿರಕ್ಕೆ ಏರಿಸುತ್ತೇವೆ ಎಂದು ಹೇಳಿದ್ದ ಕಾಂಗ್ರೆಸ್ ಸರ್ಕಾರ ಈಗ ತನ್ನ ಮಾತನ್ನು ತಪ್ಪಿದೆ ಎಂದಿದ್ದಾರೆ.

ಹೆಚ್ಚುತ್ತಿರುವ ಜೀವನ ವೆಚ್ಚ, ಬೆಲೆ ಏರಿಕೆಯಿಂದ ಆಶಾ ಕಾರ್ಯಕರ್ತೆಯರ ಜೀವನವೂ ದುಸ್ತರವಾಗಿದೆ. ಕಾಂಗ್ರೆಸ್ ಸರ್ಕಾರ ತನ್ನ ಪ್ರತಿಷ್ಠೆಯನ್ನು ಬಿಟ್ಟು, ಕೂಡಲೇ ಆಶಾ ಕಾರ್ಯಕರ್ತೆಯರ ಬೇಡಿಕೆಗಳಿಗೆ ಸ್ಪಂದಿಸಬೇಕು ಹಾಗೂ ಅವರ ಆಶ್ವಾಸನೆ ನೀಡಿದಂತೆ ಅವರ ವೇತನವನ್ನು ರೂ.15 ಸಾವಿರಕ್ಕೆ ಏರಿಸಬೇಕು ಎಂದು ಎಕ್ಸ್ ಖಾತೆಯಲ್ಲಿ ಟ್ವಿಟ್ ಮಾಡಿ ಒತ್ತಾಯಿಸಿದ್ದಾರೆ.

# ಭಕ್ತಿ ಮಾರ್ಗ ಮುಕ್ತಿಗೆ ದಾರಿ: ಗುರುಲಿಂಗಶ್ರೀಗಳು



**ಇಂಡಿ** : ಭಕ್ತಿ ಮಾರ್ಗವನ್ನು ಅನುಸರಿಸಿದರೆ ಮುಕ್ತಿ ಖಚಿತ, ಶಕ್ತಿಗಿಂತ ಭಕ್ತಿ ಮುಖ್ಯ ಎಂದು ಕಕಮರಿಯ ರಾಯಲಿಂಗೇಶ್ವರ ಮಠದ ಪೀಠಾಧ್ಯಕ್ಷ ಸದ್ಗುರು ಅಭಿನವ ಗುರುಲಿಂಗ ಜಂಗಮ ಶ್ರೀಗಳು ಹೇಳಿದರು.

ಪಟ್ಟಣದ ಸಾತಪುರದ ಮಾರತಂಡ ಗುಡ್ಲ ಇವರ ಹೊಲದ ಆವರಣದಲ್ಲಿ ನಡೆದ ಜ್ಞಾನ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದರು. ಅಮೃತತ್ವವನ್ನು ಕಳೆದುಕೊಂಡು ಪ್ರತಿ ಜೀವಿಯು ಅಮರತ್ವಕ್ಕಾಗಿ ಹಪಹಪಿಸುತ್ತಿರುತ್ತದೆ.

ಇದು ಪ್ರತಿ ಜೀವದ ಆಳ, ಗಾಢ ಬಯಕೆ,ಶಾಶ್ವತವಾಗಿ ಬದುಕಬೇಕು ಎಂಬ ಉದ್ದೇಶದಿಂದ ಎಲ್ಲ ಪ್ರಯತ್ನಗಳನ್ನು ಮಾಡುತ್ತಿರುತ್ತಾನೆ ಎಂದರು.

ಮಲ್ಲಿಕಾರ್ಜುನ ಮಹಾರಾಜರು ಮಾತನಾಡಿ ಶರಣರ ಕುರಿತು ಆದ್ಯಾತ್ಮಿಕ ಪ್ರವಚನಗಳು ತುಂಬಾ ಮಹತ್ವ ಪಡೆದಿವೆ. ಪ್ರವಚನ ಕೇಳುವದರಿಂದ ಮನಸ್ಸಿಗೆ ಶಾಂತಿ ನೆಮ್ಮದಿ ಸಿಗುತ್ತದೆ. ಹೀಗಾಗಿ ಎಲ್ಲರೂ ಭಾಗಿಯಾಗಿ ಪ್ರವಚನ ಆಲಿಸಬೇಕು ಎಂದರು.

ಹೆಸ್ಕಾಂ ನಿವೃತ ಅಧಿಕಾರಿ ಎಂ.ವಿ.ಅಗಸರ ಮಾತನಾಡಿ ಶರಣರು, ಸಂತರು ಬರೆದ ವಚನ ಮತ್ತು ಸುಂದರ ಮಾತುಗಳನ್ನು ಆಲಿಸುವದರಿಂದ , ದೇವತಾ ಕಾರ್ಯಗಳಲ್ಲಿ ಭಾಗವಹಿಸುವದರಿಂದ ಸಂತೋಷ ನೆಮ್ಮದಿ ಮುಕ್ತಿ ಸಿಗಲು ಸಾದ್ಯ ಎಂದರುಬಸಗೊಂಡ ಬಿರಾದಾರ, ಪ್ರಕಾಶ ಗುಡ್ಲ ಮಾತನಾಡಿದರು.

ಸಮಾರಂಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಮಾರತಂಡ ಗುಡ್ಲ,ಮಲ್ಲಪ್ಪ ಮೈಲಾರಿ,ಮಹಾದೇವ ರೂಗಿ, ಮಲಕಪ್ಪ ಬೆನೂರ,ಮೈಲಾರಿಗುಡ್ಲ, ದಾದು ಗುಡ್ಲ,ಮಾಳಪ್ಪ ಬಗಲಿ,ಶ್ರೀಕಾಂತ ಗುಡ್ಲ ಮತ್ತಿತರಿದ್ದರು.

# ವಸತಿ ನಿಲಯಗಳಿಗೆ ಕ್ರೀಡಾಪಟುಗಳ ಆಯ್ಕೆ

**ಬಾಗಲಕೋಟೆ** : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು 2025-26ನೇ ಸಾಲಿಗಾಗಿ ಜಿಲ್ಲಾ ಕ್ರೀಡಾ ವಸತಿ ನಿಲಯಕ್ಕೆ ಕಿರಿಯರ ವಿಭಾಗದಲ್ಲಿ ಹಾಕ, ಕುಸ್ತಿ ಮತ್ತು ಸೈಕ್ಲಿಂಗ್ ಕ್ರೀಡೆಗಳಲ್ಲಿ ಹಾಗೂ ರಾಜ್ಯದ ಕ್ರೀಡಾ ಶಾಲೆ ಮತ್ತು ವಸತಿ ನಿಲಯಗಳಿಗೆ ಕಿರಿಯರ ಮತ್ತು ಹಿರಿಯರ ವಿಭಾಗದಲ್ಲಿ ಅಥ್ಲೇಟಿಕ್ಸ್, ಹಾಕಿ, ಬಾಸ್ಕೇಟ್ ಬಾಲ್, ಜಿಮ್ನಾಸ್ಟಿಕ್, ವಾಲಿಬಾಲ್, ಫುಟ್‌ಬಾಲ್, ಜುಡೋ, ಕುಸ್ತಿ, ಫೈನ್ಸಿಂಗ್ ಆರ್ಚರಿ ಮತ್ತು ಸೈಕ್ಲಿಂಗ್ ಕ್ರೀಡೆಗಳಲ್ಲಿ ಅಭ್ಯರ್ಥಿಗಳ ಆಯ್ಕೆಯನ್ನು ಹೆಚ್ಚು ಪರಿಣಾಮಕಾ-ರಿಯಾಗಿ ಹಾಗೂ ವೈಜ್ಞಾನಿಕವಾಗಿ ನಡೆಸಲು ತೀರ್ಮಾನಿಸಲಾಗಿದೆ.

ಜನವರಿ 13 ರಂದು ಬನಹಟ್ಟಿಯ ಎಸ್.ಆರ್.ಎ ಕಾಲೇಜ, ಜಮಖಂಡಿ ತಾಲೂಕಾ ಕ್ರೀಡಾಂಗಣ, 15 ರಂದು ಮುಧೋಳ ರನ್ನ ಕ್ರೀಡಾಂಗಣ, ಬೀಳಗಿ ತಾಲೂಕಾ ಕ್ರೀಡಾಂಗಣ, 16 ರಂದು ಗುಳೇದಗುಡ್ಡ ಸರಕಾರಿ ಪದವಿ ಪೂರ್ವ ಕಾಲೇಜ, ಬಾದಾಮಿ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಅಕಾಡಮಿ, 17 ರಂದು ಹುನಗುಂದ ತಾಲೂಕಾ ಕ್ರೀಡಾಂಗಣ, ಇಳಕಲ್ಲ ವಿಜಯ ಮಹಾಂತೇಶ ಕಾಲೇಜ ಮೈದಾನ,18 ರಂದು ಬಾಗಲಕೋಟೆ ಜಿಲ್ಲಾ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಅಲ್ಲದೇ ಜಿಲ್ಲಾ ಕ್ರೀಡಾ ವಸತಿ ನಿಲಯದ ಕಿರಿಯ, ಹಿರಿಯ ವಿಭಾಗದಲ್ಲಿ ಬಾಲಕ, ಬಾಲಕಿಯರ ಜಿಲ್ಲಾ ಮಟ್ಟದ ದೈಹಿಕ ಪರೀಕ್ಷೆಯನ್ನು ಜನವರಿ 21 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸೈಕ್ಲಿಂಗ್ ತರಬೇತುದಾರರಾದ ಅನಿತಾ ನಿಂಬರಗಿ (9449959064), ಕುಸ್ತಿ ತರಬೇತುದಾರ ಕಾಡೇಶ ನ್ಯಾಮಗೌಡ (8792507012), ಹಾಕಿ ತರಬೇತುದಾರ ರಾಹುಲ ಕಟ್ಟೆ (8277347448),ಸೈಕ್ಲಿಂಗ್‌ತರಬೇತುದಾರ ಶ್ರೀಶೈಲಲಾಯನವನವರ(9480210536) ಗೆ ಸಂಪರ್ಕಿಸಬಹುದಾಗಿದೆ.

# ಕ್ರೀಡಾ ಕ್ಷೇತ್ರದಲ್ಲಿ ಪ್ರತಿಯೊಬ್ಬರೂ ತೊಡಗಿಕೊಳ್ಳುವುದು ಮುಖ್ಯ: ಸುಷ್ಮಾ ಗವಳಿ

**ಬಾಗಲಕೋಟೆ** : ಮನುಷ್ಯನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುವ ಕ್ರೀಡಾ ಕ್ಷೇತ್ರದಲ್ಲಿ ಪ್ರತಿಯೊಬ್ಬರೂ ತೊಡಗಿಕೊಳ್ಳುವುದು ಮುಖ್ಯವಾಗಿದೆ ಎಂದು ನೆಹರು ಯುವ ಕೇಂದ್ರದ ಬಾಗಲಕೋಟೆ ಜಿಲ್ಲಾ ಯುವ ಅಧಿಕಾರಿಗಳಾದ ಸುಷ್ಮಾ ಗವಳಿ ಹೇಳಿದರು.

ಬಾಗಲಕೋಟೆ ಜಿಲ್ಲೆಯ ಕೆಲೂರು ಗ್ರಾಮದ ಶ್ರೀ ಗುರು ಮಂಟೇಶ್ವರ ಪ್ರೌಢಶಾಲಾ ಮೈದಾನದಲ್ಲಿ ನೆಹರು ಯುವ ಕೇಂದ್ರ ಬಾಗಲಕೋಟೆ, ಬೆಳಕು ಪ್ರತಿಷ್ಠಾನ(ರಿ) ಕಮತಗಿ ಇವರ ಸಹಯೋಗದಲ್ಲಿ ಬುಧವಾರ ಹಮ್ಮಿಕೊಂಡಿದ್ದ ತಾಲೂಕ ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಕ್ರೀಡೆಯಲ್ಲಿ ತೊಡಗಿಕೊಳ್ಳುವುದರಿಂದ ಶಾರೀರಿಕವಾಗಿ ಮತ್ತು ಮಾನಸಿಕವಾಗಿ ಬೆಳವಣಿಗೆಯಾಗಲು ಸಾಧ್ಯವಿದೆ. ಕ್ರೀಡೆ ಮತ್ತು ಯೋಗ ಮನುಷ್ಯನ ಅವಿಭಾಜ್ಯ ಅಂಗಗಳಾಗಿ ಇದ್ದರೆ ಆರೋಗ್ಯವು ಸ್ಥಿರವಾಗಿ ಇರುತ್ತದೆ. ಹಾಗಾಗಿ ಪ್ರತಿಯೊಬ್ಬರೂ ಒಂದಿಲ್ಲೊಂದು ಕ್ರೀಡೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವ ಮೂಲಕ ಆರೋಗ್ಯವನ್ನು ಚೆನ್ನಾಗಿ ಇಟ್ಟುಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಶ್ರೀ ಗುರು ಮಂಟೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್. ಬಿ. ಹೆಳವರ ಮಾತನಾಡಿ, ವಿದ್ಯಾರ್ಥಿ ದೆಸೆಯಿಂದಲೇ ಕ್ರೀಡಾಕೂಟಗಳಲ್ಲಿ ಭಾಗಿಯಾಗಬೇಕು. ಕ್ರೀಡೆ ನಮ್ಮ ಮಾನಸಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ರಾಮ ಪಂಚಾಯತ ಅಧ್ಯಕ್ಷ ಎಂ. ಕೆ. ನಾಡಗೌಡರ ಮಾತನಾಡಿದರು. ಬಾಗಲಕೋಟೆಆರೋಗ್ಯ ಇಲಾಖೆ ಸಹಾಯಕ ಸಾಂಖ್ಯಿಕ ಅಧಿಕಾರಿ ಎಚ್. ಸಿ. ಧೂಪದ, ಬೆಳಕು ಪ್ರತಿಷ್ಠಾನ ಅಧ್ಯಕ್ಷ ಪ್ರಕಾಶ ಗುಳೇದಗುಡ್ಡ, ಶಿಕ್ಷಕರಾದ ಎಂ ಜೆ ರುದ್ರಾಕ್ಷಿ, ಎಸ್ ಬಿ ಯಾವಗಲ್ಲಮಠ, ಎಂ ಎಸ್ ಗ್ವಾಗೇರಿ, ಬಿ ಎಸ್ ಕಮತರ, ಬಿ ಎಚ್ ನಾಲತವಾಡ, ಕೆ ಎಸ್ ಬೀಳಗಿ , ಎ ಎಂ ಕಂಬಳಿ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆಗಾಗಿ ಅರ್ಜಿ

**ಬಾಗಲಕೋಟೆ** : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪ್ರಸಕ್ತ ಸಾಲಿನಲ್ಲಿ ಭಾರತ ಸರಕಾರದಿಂದ ಮಾನ್ಯತೆ ಪಡೆದ ಅಧಿಕೃತ ಕ್ರೀಡಾ ಫೆಡರೇಶನ್‌ಗಳು ಆಯೋಜಿಸಿರುವಕ್ರೀಡಾಕೂಟಗಳಲ್ಲಿಕರ್ನಾಟಕವನ್ನು ಪ್ರತಿನಿಧಿಸಿ ಭಾಗವಹಿಸಿದ ಜಿಲ್ಲೆಯ ಕ್ರೀಡಾಪಟುಗಳಿಗೆ ನಿಯಮಾನುಸಾರ ಒಬ್ಬರಿಗೆ ಗರಿಷ್ಟ 5 ಸಾವಿರ ರೂ.ಗಳಂತೆ ಪ್ರಯಾಣ ಭತ್ಯೆ ಪಾವತಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಸಹಾಯಕ ನಿರ್ದೇಶಕರ ಕಚೇರಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಜಿ ನಮೂನೆ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿಯೊಂದಿಗೆ ಬ್ಯಾಂಕ್ ಪಾಸ್ ಬುಕ್ ಝರಾಕ್ಸ್‌ಪ್ರತಿ, ರಾಷ್ಟ್ರ ಅಥವಾ ಅಂತರರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಪ್ರಯಾಣ ಬೆಳೆಸಿದ ಮೂಲ ಟಿಕೆಟ್‌ಗಳು, ಆಧಾರ ಕಾರ್ಡ ಹಾಗೂ ಕ್ರೀಡಾಕೂಟಗಳಲ್ಲಿ ಭಾಗವಹಿಸಿದ ಪ್ರಮಾಣ ಪತ್ರ ಹಾಗೂಪದಕಪಡೆದಪ್ರಮಾಣಪತ್ರದೊಂದಿಗೆಫೆಬ್ರವರಿ 1 ರೊಳಗಾಗಿ ಸಲ್ಲಿಸುವಂತೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ./08354-235896, 9945284771ಗೆ ಸಂಪರ್ಕಿಸಬಹುದಾಗಿದೆ.

# ಸಾಂಪ್ರದಾಯಿಕ ಆಹಾರ ಸೇವನೆ ಮಾಡುವುದು ಸೂಕ್ತ : ಡಾ. ಎಚ್.ಬಿ. ಶಿವಲೀಲಾ

ಬಾಗಲಕೋಟೆ: ಸಾಂಪ್ರದಾಯಿಕ ಆಹಾರ ಸೇವನೆ ಮಾಡುವುದೆ ಸೂಕ್ತವಾಗಿದ್ದು, ಆಹಾರವೇ ಔಷಧವಾಗಬೇಕೆ ಹೊರತು ಔಷದ ಆಹಾರವಾಗಬಾರದು ಎಂದು ಬೆಂಗಳೂರಿನ ಪೋಷಣ ತಜ್ಞೆ ನಿವೃತ್ತ ಪ್ರಾಧ್ಯಾಪಕಿ ಡಾ.ಎಚ್.ಬಿ.ಶಿವಲೀಲಾ ಹೇಳಿದರು.

ಅವರು ನಗರದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಬಾಗಲಕೋಟೆ ಐಕ್ಯೂಎಸಿ ಸಹಯೋಗದಲ್ಲಿ ಸ್ನಾತಕೋತ್ತರ ಸಸ್ಯಶಾಸ್ತ್ರ ವಿಭಾಗ ಹಾಗೂ ಗೃಹ ವಿಜ್ಞಾನ ವಿಭಾಗಗಳ ಅಡಿಯಲ್ಲಿ ಆರೋಗ್ಯಕರ ಜೀವನಕ್ಕೆ ಪೋಷಣೆ ಎಂಬ ವಿಷಯದ ವಿಶೇಷ ಉಪನ್ಯಾಸದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡಿ ಅವರು, ಸ್ಥಳೀಯ ಉತ್ಪನ್ನಗಳನ್ನ ಬಳಸುವುದ-ರಿಂದ ಆರೋಗ್ಯವನ್ನು ಸಮತೋಲನದಲ್ಲಿ ಇಡಲು ಸಹಾಯಕವಾಗುವುದು,. ಬೆಳಗಿನ ಉಪಹಾರದ ಸೇವನೆಯು ಹಣ್ಣು



ತರಕಾರಿ ಸೊಪ್ಪು ಕಾಳುಗಳಿಂದ ಕೂಡಿರಲಿ ಇದರಿಂದ ಇಡೀ ದಿನ ಚೈತನ್ಯದಿಂದ ಕಾರ್ಯನಿರ್ವಹಿಸಲು ಸಾಂಪ್ರದಾಯಿಕ ಆಹಾರ ಸೇವನೆ ಮಾಡುವುದು ಸೂಕ್ತ. ಆಹಾರವೇ ಔಷಧವಾಗಬೇಕೆ ಹೊರತು ಔಷದ ಆಹಾರವಾಗಬಾರದು, ಸಿರಿಧಾನ್ಯದ ಸೇವನೆಯನ್ನು ಬೇರೆ ಬೇರೆ ರೂಪಗಳಲ್ಲಿ ಪ್ರತಿಯೊಬ್ಬರು ಸೇವನೆ ಮಾಡುವುದರಿಂದ ಹಲವಾರು ಕಾಯಿಲೆ ಗಳಿಗೆ ಕಡಿವಾಣ ಹಾಕಬಹುದು. ಅದರೊಂದಿಗೆ ಉತ್ತಮ ಜಲ ವಾಯು ಶಾಖ ಪೋಷಕಾಂಶಗಳ ಜೊತೆಗೆ ಸಾವಯವ ಆಹಾರ ಸೇವಿಸುವುದರಿಂದ ನಮ್ಮ ದೇಹವನ್ನು ತುಷ್ಠಿದಾಯಕವಾಗಿಡುವುದಲ್ಲದೆ ಪರಿಸರ ಸ್ನೇಹಿ, ಆರೋಗ್ಯ ಸ್ನೇಹಿ, ದೇಶವನ್ನ ಹಸಿರಾಗಿಸುವುದರ ಜೊತೆಗೆ ಆರ್ಥಿಕ ಅಭಿವೃದ್ಧಿ ಸಾಧಿಸಲು ಸಾಧ್ಯವಾಗುವುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾಯರಾದ ಎಸ್.ಜೆ. ಒಡೆಯರ ಅವರು ವಹಿಸಿದ್ದರು. ಪ್ರಾರ್ಥನೆ ಕುಮಾರಿ ವಿ.ಸಿ. ತಾಳಿಕೋಟಿ, ಆಯ್ ಕ್ಯೂಎಸಿ ಸಂಂ-ಯೋಜಕರಾದ ಶ್ರೀಮತಿ ಪಿ.ಕೆ. ಚೌಗೂಲ ಸ್ವಾಗತಿಸಿದರು. ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಎ.ಕೆ.ಮಾರಿಹಾಳ ಪರಿಚಯಿಸಿದರು. ಡಾ. ಅಶ್ವಿನಿ ಯಂಕಂಟಿ ವಂದಿಸಿದರು,ಶ್ರೀಮತಿ ವೀಣಾಶ್ರೀಪೊಲೀಸ್ ಪಾಟೀಲ್ ನಿರೂಪಿಸಿದರು.

# ಶಿಕ್ಷಕ ಶಂಕರಪ್ಪ ಬಜಂತ್ರಿಗೆ ಲೀಡರ್ ಟ್ರೇನರ್ ಅರ್ಹತೆ

**ವಿಜಯಪುರ** : ನವದೆಹಲಿಯ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಷ್ಟ್ರೀಯ ಸಂಸ್ಥೆ ನಡೆಸುವ ರಾಷ್ಟ್ರ ಮಟ್ಟದ ಲೀಡರ್ ಟ್ರೇನರ್ ತರಬೇತಿಯಲ್ಲಿ ವಿಜಯಪುರ ಜಿಲ್ಲೆಯ ಕೆಬಿಎಂಪಿಎಸ್ ಶಾಲೆ ನಿಡಗುಂದಿಯ ಮುಖ್ಯೋಪಾಧ್ಯಾಯರು ಹಾಗೂ ಸ್ಕೌಟ್ಸ್‌ಗೈಡ್ಸ್ ನಿಡಗುಂದಿ



ತಾಲೂಕಾ ಕಾರ್ಯದರ್ಶಿ ಶಂಕರಪ್ಪ ಬಜಂತ್ರಿ ಅವರು ಅರ್ಹತೆ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಕ್ಕೆ ಸ್ಕೌಟ್ಸ್ ಮತ್ತು ಗೈಡ್ಸ್ ವಿಜಯಪುರ ಜಿಲ್ಲಾ ಸಂಸ್ಥೆಯು ಪರವಾಗಿ ಜಿಲ್ಲಾ ಪ್ರಧಾನ ಆಯುಕ್ತ ಸಿದ್ದಣ್ಣ ಸಕ್ರಿ ಅವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

# ಹು-ಧಾ ಅವಳಿನಗರಕ್ಕೆ ಬಂದ್ ಬಿಸಿ ಬಸ್, ಆಟೋ ಸಂಚಾರ ಬಂದ್-ಮಾರುಕಟ್ಟೆ ಸ್ತಬ್ಧ



**ಹುಬ್ಬಳ್ಳಿ :** ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತು ನೀಡಿರುವ ಹೇಳಿಕೆ ಖಂಡಿಸಿ ವಿವಿಧ ದಲಿತ ಸಂಘಟನೆಗಳು ಹುಬ್ಬಳ್ಳಿ-ಧಾರವಾಡ ಬಂದ್‌ಗೆ ಇಂದು ಕರೆ ನೀಡಿದ್ದು, ಅವಳಿ ನಗರಕ್ಕೆ ಬಂದ್ ಬಿಸಿ ತಟ್ಟಿದೆ.

ಹುಬ್ಬಳ್ಳಿ-ಧಾರವಾಡ ಅವಳಿ ನಗರದಲ್ಲಿ ಬಸ್, ಆಟೊ-ರಿಕ್ಷಾ ಹಾಗೂ ಇನ್ನಿತರ ವಾಹನಗಳ ಸಂಚಾರ ಬೆಳಿಗ್ಗೆಯಿಂದ ಇರಲಿಲ್ಲ. ಅಲ್ಲಲ್ಲಿ ಪ್ರತಿಭಟನಾಕಾರರು ಟೈರ್‌ಗಳಿಗೆ ಬೆಂಕಿ ಹಚ್ಚಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸುತ್ತಿದ್ದುದು ಕಂಡುಬಂತು. ಪ್ರಮುಖ ಮಾರುಕಟ್ಟೆ ಪ್ರದೇಶಗಳಲ್ಲಿಯೂ ಅಂಗಡಿ ಮುಗ್ಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ಕೇಂದ್ರ ಗೃಹ ಸಚಿವ ಅಮೀತ್ ಶಾ ಅವರನ್ನು ವಜಾಗೊಳಿಸಲು ಆಗ್ರಹಿಸಲಾಯಿತು.

ಬೆಳಿಗ್ಗೆ ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಪ್ರಮುಖ ಮಾರುಕಟ್ಟೆ ಪ್ರದೇಶಗಳಾದ ದುರ್ಗದ ಬೈಲ್, ಜನತಾ ಬಜಾರ್, ಹಳೇ-ಹುಬ್ಬಳ್ಳಿಯಲ್ಲಿ ಅಂಗಡಿ ಮುಂಗಟ್ಟುಗಳು ಬಂದ್ ಆಗಿರುವುದು ಕಂಡು ಬಂತು. ತರಕಾರಿ ಮಾರುಕಟ್ಟೆಗಳು ಸಹ ಸ್ತಬ್ಧವಾಗಿದ್ದವು. ನಗರದ ಪಿ.ಬಿ ರಸ್ತೆ, ಗೋಕುಲ್ ರಸ್ತೆ, ಕುಸುಗಲ್ ರಸ್ತೆ, ಗದಗ್ ರಸ್ತೆ, ಕಾರವಾರ್ ರಸ್ತೆ, ಗಬ್ಬೂರ್ ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ವಾಹನಗಳ ಸಂಚಾರ ಕಂಡುಬರಲಿಲ್ಲ.

ಬಸ್ ಹಾಗೂ ಆಟೋರಿಕ್ಷಾ ಸೇರಿದಂತೆ ವಿವಿಧ ಖಾಸಗಿ ವಾಹನಗಳನ್ನು ನಗರದ ಹೊರವಲಯಗಳಲ್ಲಿಯೂ ತಡೆದು ಪ್ರತಿಭಟಿಸಿದ್ದರಿಂದ ಪ್ರಯಾಣಿಕರು ಪರದಾಡಿ ಕಾಲ್ನಡಿಗೆಯಲ್ಲಿಯೇ ಸಂಚರಿಸುತ್ತಿದ್ದುದು ಕಂಡುಬಂತು. ಬೈಪಾಸ್ ರಸ್ತೆಯಲ್ಲಿಯೇ ವಾಹನಗಳು ಬೇರೆ ಬೇರೆ ರಸ್ತೆಗಳ ಮೂಲಕ ಸಂಚರಿಸಲು ಪರದಾಡಿದವು. ರೈಲ್ವೆ ನಿಲ್ದಾಣದಿಂದ ವಿವಿಧ ಪ್ರದೇಶಗಳಿಗೆ ತೆರಳುವ ಜನತೆಯೂ ವಾಹನ ವ್ಯವಸ್ಥೆ ಇರದೇ ಕಾಲ್ನಡಿಗೆಯಲ್ಲಿಯೇ ಸಂಚರಿಸುತ್ತಿದ್ದುದು ಕಂಡುಬಂತು.

ಧಾರವಾಡದ ಜ್ಯುಬಲಿ ವೃತ್ತ, ಸುಭಾಸ್ ರಸ್ತೆ ಸೇರಿದಂತೆ ವಿವಿಧ ಪ್ರಮುಖ ಮಾರುಕಟ್ಟೆ ಪ್ರದೇಶಗಳಲ್ಲಿಯೂ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ಬಂದ್ ಹಿನ್ನೆಲೆಯಲ್ಲಿ ಶಾಲೆಗಳಿಗೆ ರಜೆ ಘೋಷಿಸಲಾಗಿತ್ತು. ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಲ್ಲಿ ಬೈಕ್ ರ್ಯಾಲಿಗಳನ್ನು ನಡೆಸಲಾಯಿತು. ನಗರದ ಪ್ರಮುಖ ರಸ್ತೆಗಳಲ್ಲಿ ವಿವಿಧ ವಾದ್ಯಗಳನ್ನು ಬಾರಿಸುವ ಮೂಲಕ ಹಾಗೂ ಧ್ವನಿವರ್ದಕಗಳ ಮೂಲಕ ಪ್ರತಿಭಟನಾ ಮೆರವಣಿಗೆಯನ್ನು ನಡೆಸಲಾಯಿತು. ಅಲ್ಲದೆ ಚಕ್ಕಡಿಗಳ ಮೂಲಕವೂ ಮೆರವಣಿಗೆ ನಡೆಸಲಾಯಿತು. ನಗರದ ಪ್ರಮುಖ ಸ್ಥಳಗಳಿಂದ ಪ್ರತಿಭಟನಾ ಮೆರವಣಿಗೆ ಕೈಗೊಂಡು, ನಂತರ ಹೃದಯಭಾಗವಾದ ರಾಣಿ ಚೆನ್ನಮ್ಮ ವೃತ್ತಕ್ಕೆ ಆಗಮಿಸಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

**ವ್ಯಾಪಕ ಬಿಗಿ ಭದ್ರತೆ:** ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಅವಳಿ ನಗದಲ್ಲಿ ವ್ಯಾಪಕ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು. ಚೆನ್ನಮ್ಮ ವೃತ್ತ ಸೇರಿದಂತೆ ವಿವಿಧ ಸ್ಥಳ ಹಾಗೂ ವೃತ್ತಗಳಲ್ಲಿ ಪೊಲೀಸ್ ಬಂದೋಬಸ್ತ್ ಇತ್ತು.

**ನಾವು ಸಂವಿಧಾನ, ಸ್ವಾತಂತ್ರ ಸೇನಾನಿಯನ್ನು ಗೌರವಿಸಬೇಕು**

**ಧಾರವಾಡ:** ನಾವು ಸಂವಿಧಾನ, ಸ್ವಾತಂತ್ರ್ಯ ಸೇನಾನಿಯನ್ನು ಗೌರವಿಸಬೇಕು ಎಂದು ಶಾಸಕ ಪ್ರಸಾದ ಅಬ್ಬಯ್ಯ ಹೇಳಿದರು. ಇಂದಿಲ್ಲಿ ವಿವಿಧ ದಲಿತ ಸಂಘಟನೆಗಳು ಕರೆ ನೀಡಿದ್ದ ಬಂದ್ ಕಾಲಕ್ಕೆ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ವಿಶ್ವಮಾನವ ಡಾ. ಅಂಬೇಡ್ಕರರ ಕುರಿತು ಹಗುರವಾಗಿ ಮಾತನಾಡಿದ್ದಾರೆ. ಅದನ್ನು ಸಹಿಸಿಕೊಳ್ಳುವುದಿಲ್ಲ ಎಂದು ಅವರು ಹೇಳಿದರು. ನಮಗೆ ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನವೇ ಸ್ವರ್ಗ. ಅಮೀತ್ ಶಾ ಬೇಕಿದ್ದರೆ ಬೇರೆ ಸ್ವರ್ಗಕ್ಕೆ ಹೋಗಲಿ ಎಂದು ಅವರು ನುಡಿದರು.

# ಬಿಜೆಪಿಯಿಂದ ದಿಕ್ಕು ತಪ್ಪಿಸುವ ಕೆಲಸ: ಏಗನಗೌಡರ



**ಧಾರವಾಡ :** ಧಾರವಾಡಕ್ಕೆ ಪ್ರತ್ಯೇಕ ಪಾಲಿಕೆ ಘೋಷಣೆಯಾದ ಬೆನ್ನಲ್ಲೇ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿರುವ ಬಿಜೆಪಿ ನಡೆ ಖಂಡನೀಯ. ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹಾಗೂ ಶಾಸಕ ಅರವಿಂದ ಬೆಲ್ಲದ ಅವರು ಪ್ರಚಾರಕ್ಕಾಗಿ ಬ್ಯಾನರ್‌ಗಳನ್ನು ಅಳವಡಿಸಿ ಜನರನ್ನು ತಪ್ಪು ದಾರಿಗೆ ಎಳೆಯುತ್ತಿದ್ದಾರೆ. ಎಂದು ಧಾರವಾಡ 71 ರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅರವಿಂದ ಏಗನಗೌಡರ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಧಾರವಾಡಕ್ಕೆ ಪ್ರತ್ಯೇಕ ಪಾಲಿಕೆ ಘೋಷಣೆಯ ಹಿಂದೆ ಉಸ್ತುವಾರಿ ಸಚಿವ ಸಂತೋಷ ಲಾಡ್, ಶಾಸಕರಾದ ವಿನಯ ಕುಲಕರ್ಣಿ, ಪ್ರಸಾದ ಅಬ್ಬಯ್ಯ ಹಾಗೂ ಎನ್.ಎಚ್. ಕೋನರಡ್ಡಿ ಅವರ ನಿರಂತರ ಪ್ರಯತ್ನವಿದೆ.

ಇವರ ಒತ್ತಡದಿಂದ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ. ಶಿವಕುಮಾರ ಅವರು ಧಾರವಾಡ ಜನತೆಯ ಹಲವು ವರ್ಷಗಳ ಬೇಡಿಕೆಯನ್ನು ಈಡೇರಿಸಿದ್ದಾರೆ ಎಂದರು.

ಮತ್ತೊಂದೆಡೆ ಸಚಿವ ಜೋಶಿ ಹಾಗೂ ಶಾಸಕ ಬೆಲ್ಲದ ಅವರು ಕ್ರೆಡಿಟ್ ಪಾಲಿಟಿಕ್ಸ್ ಮಾಡುತ್ತಿದ್ದಾರೆ. ಈ ಹಿಂದೆ ಅವರದೇ ಸರ್ಕಾರ ಇದ್ದಾಗ ಪ್ರತ್ಯೇಕ ಪಾಲಿಕೆ ಘೋಷಿಸದೆ. ಕಾಂಗ್ರೆಸ್ ಸರ್ಕಾರದ ಆದೇಶವನ್ನು ನಾವು ಮಾಡಿದ್ದೇವೆ ಎಂದು ಬೆನ್ನು ಚಪ್ಪರಿಸಿಕೊಳ್ಳುತ್ತಿದ್ದಾರೆ. ಡಬಲ್ ಇಂಜಿನ್ ಸರ್ಕಾರ ಎನ್ನುತ್ತಿದ್ದವರು ಪ್ರತ್ಯೇಕ ಪಾಲಿಕೆ ಹೋರಾಟಗಾರರು ಭೇಟಿಯಾದಾಗ ಸೌಜನ್ಯಕ್ಕೂ ಪ್ರಯತ್ನಿಸದೇ ಹಾರಿಕೆ ಉತ್ತರ ನೀಡಿದರು ಎಂದರು.

ಪಾಲಿಕೆ ಪ್ರತಿಪಕ್ಷ ನಾಯಕ ರಾಜಶೇಖರ ಕಮತಿ ಮಾತನಾಡಿ, ಕಾಂಗ್ರೆಸ್ ಶಾಸಕ, ಸಚಿವರ ಕಾಳಜಿ ಮತ್ತು ಪ್ರಯತ್ನದ ಫಲವಾಗಿ ಪಾಲಿಕೆ ಘೋಷಣೆಯಾಗಿದೆ. ವಿಶೇಷವಾಗಿ ಶಾಸಕ ವಿನಯ ಕುಲಕಣಿ ಅವರು ಅಧಿಕಾರಿಗಳಿಂದ ಸಮರ್ಪಕ ಮಾಹಿತಿ ತರಿಸಿಕೊಂಡು ಸರ್ಕಾರಕ್ಕೆ ಸಲ್ಲಿಸುವ ಕೆಲಸ ಮಾಡಿದರು. ನಗರಾಭಿವೃದ್ಧಿ ಸಚಿವ ಸಿಎಂ. ಡಿಸಿಎಂ. ಮೇಲೆ ನಿರಂತರ ಒತ್ತಡ ಹೇರಿ ಘೋಷಣೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದರು. ಕವಿತಾ ಕಬ್ಬೇರ, ರವಿ ಮಾಳಿಗೇರ, ವೀರಣ್ಣ ಶೆಟ್ಟರ್, ಸೂರವ್ವ ಪಾಟೀಲ ಸುದ್ದಿಗೋಷ್ಠಿಯಲ್ಲಿದ್ದರು.

# ಧಾರವಾಡ: ಶ್ರೀ ಜಕಣಾಚಾರಿ ಸಂಸ್ಮರಣಾ ದಿನಾಚರಣೆ




**ಧಾರವಾಡ :** ಜಕಣಾಚಾರಿ ಅವರು ತಮ್ಮ ಜೀವನವನ್ನುಕಲೆಗಾಗಿಮುಡಿಪಾಗಿಟ್ಟಿದ್ದರು. ತಮ್ಮ ವೃತ್ತಿ ಜೀವನದಲ್ಲಿ ನಾಡಿನ ಹಲವು ದೇವಾಲಯಗಳನ್ನು ನಿರ್ಮಿಸಿದ್ದಾರೆ. ಅವರ ಬದುಕು ಭವ್ಯ ಕಲಾಪರಂಪರೆಯ ಪ್ರತೀಕವಾಗಿದೆ ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರ ರಾಮಪ್ಪ ಕೃಷ್ಣಪ್ಪ ಬಡಿಗೇರ ಅವರು ಹೇಳಿದರು.

ಅವರು ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದ್ದ, ಅಮರಶಿಲ್ಪಿ ಶ್ರೀ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅಮರಶಿಲ್ಪಿ ಶ್ರೀ ಜಕಣಾಚಾರಿ ಭಾವಚಿತ್ರಕ್ಕೆ ಪು??ಪರ್ಚನೆ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಮರಶಿಲ್ಪಿ ಜಕಣಾಚಾರಿ ಅವರು ನಮ್ಮ ಸಮಾಜಕ್ಕೆ ಅಪಾರವಾದ ಕೊಡುಗೆಯನ್ನು ನೀಡಿದ್ದಾರೆ. ಭಾರತೀಯ ಇತಿಹಾಸದಲ್ಲಿ ಕಲೆಗೆ ತನ್ನದೇ ಆದ ಮಹತ್ವ ಇದೆ. ಆ ದಿಸೆಯಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರು ಬೇಲೂರು, ಹಳೆಬೀಡು, ಸೋಮನಾಥಪುರ ಮತ್ತಿತರ ಕಡೆಗಳಲ್ಲಿ ಕೆತ್ತಿರುವ ಕೆತ್ತನೆಗಳೆ ಅವರ ಅಮರ ಕಲೆಗೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.

ಶಿಲ್ಪಕಲೆ ಎನ್ನುವುದು ಅತ್ಯಂತ ಕಷ್ಟಕರವಾದ ಕೆತ್ತನೆಯ ಕಲೆ. ಇಂತಹ ವಿಶೇಷ ಕಲೆಯ ಮೂಲಕ ಅಮರಶಿಲ್ಪಿ ಜಕಣಾಚಾರಿ ಅವರು ನಾಡಿನ ಶಿಲ್ಪಕಲೆಗೆ ಅಪಾರ ಕೊಡುಗೆ ನೀಡಿದ್ದಾರೆ. ವಿದೇಶಿಗರು ನಮ್ಮ ನಾಡಿನ ಶಿಲ್ಪಕಲೆಯನ್ನು ನೋಡಿ ಬೆರಗಾಗುವಂತೆ ಮತ್ತು ನೋಡುಗರನ್ನು ಸೆಳೆಯುವಂತಹ ಶಿಲ್ಪಕಲೆಯನ್ನು ನಮ್ಮ ನಾಡಿನಲ್ಲಿ ನಿರೂಪಿಸಲಾಗಿದೆ. ಇಂತಹ ಶಿಲ್ಪಕಲೆಗಳನ್ನು ಇಂದು ನಾವುಗಳು ಸ್ಮರಿಸುವ ಮೂಲಕ ಶಿಲ್ಪಕಲೆಗಳನ್ನು ಗೌರವದಿಂದ ಪೊ?ಷಿಸಬೇಕಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಮಾತನಾಡಿ, ನಮ್ಮ ನಾಡಿನಲ್ಲಿರುವ ಕಸೂತಿ, ಬಟ್ಟೆ ನೇಯುವುದು, ಕುಂಬಾರಿಕೆ, ಬುಟ್ಟಿ ನೇಯುವುದು, ಹಾಸಿಗೆ ನೇಯುವುದು ಮುಂತಾದ ಕಲೆಗಳು ನಶಿಸಿ ಹೋಗುತ್ತಿವೆ. ಇವುಗಳ ಸಂರಕ್ಷಣೆ ಮತ್ತು ಮುಂದುವರಿಕೆಗಾಗಿ ಸರಕಾರ ಅನೇಕ ಯೋಜನೆಗಳನ್ನುಜಾರಿಗೊಳಿಸಿದೆ.ಆಸಕ್ತರು ಇದರಪ್ರಯೋಜನಪಡೆದುಕೊಳ್ಳಬೇಕೆಂದು ಹೇಳಿದರು.

ಧಾರವಾಡ ಆಕಾಶವಾಣಿ ನಿವೃತ್ತ ಕಾರ್ಯಕ್ರಮ ನಿರ್ವಾಹಕ ಡಾ. ವಿರೂಪಾಕ್ಷ. ಬಿ. ಬಡಿಗೇರ ಅವರು ಅಮರಶಿಲ್ಪಿ ಶ್ರೀ ಜಕಣಾಚಾರಿ ಅವರ ಜೀವನ ಚರಿತ್ರೆ ಕುರಿತು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು. ಸಾಧಕರಾದ ರವೀಂದ್ರಾಚಾರ್ಯ ಮತ್ತು ಕೃಷ್ಣಾ ಹಿತ್ತಾಳೆ ಅವರನ್ನು ಸನ್ಮಾಸಿಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಮೌನೇಶ್ವರ ಧರ್ಮನಿಧಿ ಸಂಸ್ಥೆಯ ಅಧ್ಯಕ್ಷ ಮಹಾರುದ್ರ ಬ.ಬಡಿಗೇರ,ವಿಶ್ವಕರ್ಮ ಜಿಲ್ಲಾಮಹಾಸಭಾ ಅಧ್ಯಕ್ಷ ಕಾಳಪ್ಪ ವಿ.ಬಡಿಗೇರ, ಜನಜಾಗೃತಿ ಸಮಿತಿ ಅಧ್ಯಕ್ಷ ವಸಂತ ಅರ್ಕಾಚಾರ, ವಿಶ್ವಕರ್ಮ ಮಹಾಒಕ್ಕೂಟ ಅಧ್ಯಕ್ಷ ನಿರಂಜನ ಎನ್. ಬಡಿಗೇರ, ವಿಶ್ವಕರ್ಮ ನೌಕರರ ಮತ್ತು ನಿವೃತ್ತ ನೌಕರರ ಸಂಘ ಅಧ್ಯಕ್ಷ ವಿಠ್ಠಲ ಜಿ. ಕಮ್ಮಾರ, ಮೌನೇಶ್ವರ ಟ್ರಸ್ಟ್ ಕಮಿಟಿ ನಿರ್ದೇಶಕ ಸಂತೋಷ ಬಡಿಗೇರ, ರಾಜ್ಯ ಮಹಿಳಾ ಅಧ್ಯಕ್ಷೆ ಲಕ್ಷ್ಮೀ ಭಾಸಕರ ಬಡಿಗೇರ ಅವರು ಉಪಸ್ಥಿತರಿದ್ದರು.

# ರಾಷ್ಟ್ರಕವಿ ಕುವೆಂಪು ಜನ್ಮದಿನ ಆಚರಣೆ



**ಧಾರವಾಡ :** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಇಂದು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಪೂಜೆ, ಪುಷ್ಪಾರ್ಚನೆ ಸಲ್ಲಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತ ಅಧ್ಯಕ್ಷ ಡಾ. ಲಿಂಗರಾಜ ಅಂಗಡಿ, ಹಿರಿಯ ಸಾಹಿತಿ ಬಾಳಣ್ಣ ಶೀಗಿಹಳ್ಳಿ, ಜನಜಾಗೃತಿ ಸಮಿತಿ ಅಧ್ಯಕ್ಷ ವಸಂತ ಅರ್ಕಾಚಾರ, ವೀರಣ್ಣ ಪತ್ತಾರ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು, ಆರತಿ ದೇವಶಿಕಾಮಣಿ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಅಮೃತ್ ನೋನಿ ಆರ್ಥೋ ಪ್ಲಸ್ ಕ್ಲಿನಿಕಲ್ ಟ್ರಯಲ್ ಪೂರ್ಣ: ವ್ಯಾಲ್ಯೂ ಪ್ರಾಡಕ್ಟ್ಸ್ ಪ್ರೈ.ಲಿ ನ ಮ್ಯಾನೇಜಿಂಗ್ ಡೈರೆಕ್ಟರ್ ಡಾ.ಎ.ಕೆ. ಶ್ರೀನಿವಾಸಮೂರ್ತಿ




**ಬೆಂಗಳೂರು :** ಆಯುರ್ವೇದ ಔಷಧಿಗಳನ್ನು ಹ್ಯೂಮನ್ ಕ್ಲಿನಿಕಲ್ ಟ್ರಯಲ್ ಗಳಿಗೆ ಒಳಪಡಿಸುವುದು ಅಪರೂಪ, ಆದರೆ, ಅಮೃತ್ ನೋನಿ ತನ್ನ ಉತ್ಪನ್ನಗಳ ಗುಣಮಟ್ಟದ ಬಗ್ಗೆ ತನಗಿರುವ ಬದ್ಧತೆ ಹಾಗೂ ಗ್ರಾಹಕರಿಗೆ ಒಳ್ಳೆಯದನ್ನೇ ನೀಡುವ ಪ್ರಮಾಣಿಕತೆಯನ್ನು ಸ್ಪಷ್ಟಪಡಿಸುವ ನಿಟ್ಟಿನಲ್ಲಿ ಅಖಿಖಿಖ-ಖಿಜಿರ ಖಿಟಿಜಿಚಿ ಮಾರ್ಗಸೂಚಿಗಳಡಿ ಆಸ್ಟಿಯೋಆರ್ಥೈಟಿಸ್ (ಅಸ್ಥಿಸಂಧಿವಾತ), ರುಮಟಾಯ್ಡ್ ಆರ್ಥೈಟಿಸ್ (ರುಮಟಾಯ್ ಸಂಧಿವಾತ) ಮತ್ತು ಗೌಟ್ ನಂತಹ ಕಾಯಿಲೆಗಳ ಮೇಲೆ ಅಮೃತ್ ನೋನಿ ಅರ್ಥೋ ಪ್ಲಸ್ ಹ್ಯೂಮನ್ ಕ್ಲಿನಿಕಲ್ ಟ್ರಯಲ್ ನಡೆಸಲಾಗಿದ್ದು ಉತ್ತಮ ಹಾಗೂ ಪರಿಣಾಮಕಾರಿ ಫಲಿತಾಂಶ ನೀಡುವ ಬಗ್ಗೆ ಈ ಸಂಶೋಧನೆಗಳಿಂದ ಸಾಬೀತಾಗಿದೆ ಎಂದು ವ್ಯಾಲ್ಯೂ ಪ್ರಾಡಕ್ಟ್. ಲಿ ನ ಮ್ಯಾನೇಜಿಂಗ್ ಡೈರೆಕ್ಟರ್ ಡಾ.ಎ.ಕೆ. ಶ್ರೀನಿವಾಸಮೂರ್ತಿ ತಿಳಿಸಿದರು.

ಇಂದು ನಗರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಈ ಮಾಹಿತಿ ನೀಡಿದರು. ಭಾರತದಲ್ಲಿ 210 ಮಿಲಿಯನ್ನಿಂತ ಹೆಚ್ಚು ಜನ ಆರ್ಥೈಟಿಸ್ ಇಂದ ಬಳಲುತ್ತಿದ್ದಾರೆ. ಇದು ಜನಸಂಖ್ಯೆಯ 15% ರಷ್ಟಿದೆ. ಕ್ಯಾನ್ಸರ್, ಏಡ್ಸ್ ಮತ್ತು ಮಧುಮೇಹಕ್ಕಿಂತಲೂ ಇದು ಹೆಚ್ಚು ವ್ಯಾಪಕವಾಗಿದೆ. "ಒತ್ತಡ ಮತ್ತು ಅನಾರೋಗ್ಯಕರ ಜೀವನಶೈಲಿಯ ಬದಲಾವಣೆಗಳಿಂದಾಗಿ, ಇದೀಗ ವೃದ್ಧರು ಮಾತ್ರವಲ್ಲದೆ ಯುವಜನತೆಗೂ ಸಮಸ್ಯೆಯಾಗಿ ಕಾಡುತ್ತಿದೆ. ಅಧ್ಯಯನಗಳ ಪ್ರಕಾರ, 100 ಕ್ಕೂ ಹೆಚ್ಚು ಪ್ರಕಾರಗಳ ಆರ್ಥೈಟಿಸ್ ಇದೆ, ಅವುಗಳಲ್ಲಿ ಆಸ್ಟಿಯೋ ಆರ್ಥೈಟಿಸ್, ರುಮಟಾಯ್ಡ್ ಆರ್ಥೈಟಿಸ್ ಮತ್ತು ಗೌಟ್ ಜನರಲ್ಲಿ ಹೆಚ್ಚು ಸಾಮಾನ್ಯವಾಗಿವೆ. ಆರ್ಥೈಟಿಸ್ ಗೆ ಸಂಪೂರ್ಣ ಚಿಕಿತ್ಸೆ ಲಭ್ಯವಿಲ್ಲದ ಕಾರಣ, ನಾವು ಹೆಚ್ಚು ಸುರಕ್ಷಿತ ಮತ್ತು ಪರಿಣಾಮಕಾರಿಯಾದ ಔಷದಿಗಳ ಮೂಲಕ ಉತ್ತಮ ನಿರ್ವಹಣಗೆ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ".

ಅಮೃತ್ ನೋನಿ ಕಳೆದ ಹದಿನೈದು ವರ್ಷಗಳಿಂದ ರಾಷ್ಟ್ರ ಮಟ್ಟದ ಆಯುರ್ವೇದ ಔಷಧ ತಯಾರಿಕೆಯ ಕ್ಷೇತ್ರದಲ್ಲಿರುವ ಅತ್ಯಂತ ವಿಶ್ವಾಸಾರ್ಹ ಬ್ರಾಂಡ್ಗಳಲ್ಲಿ ಒಂದಾಗಿದೆ. ಅಮೃತ ನೋನಿ ಉತ್ಪನ್ನಗಳ ತಯಾರಕರಾದ ವ್ಯಾಲ್ಯೂ ಪ್ರಾಡಕ್ಟ್ ಪ್ರೈವೇಟ್ ಲಿಮಿಟೆಡ್, CTRI-REG INDIA ದ ಮಾರ್ಗಸೂಚಿಗಳ ಅಡಿಯಲ್ಲಿ ನಡೆಸಲಾದ ಅಮೃತ್ ನೋನಿ ಅರ್ಥೋ ಪ್ಲಸ್ ಗೆ ಸಂಬಂಧಿಸಿದ ಡಬಲ್ ಬ್ಲೈಂಡೆಡ್ ಮತ್ತು ರಾಂಡಮೈಜ್ ಹ್ಯೂಮನ್ ಕ್ಲಿನಿಕಲ್ ಟ್ರಯಲ್ಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಈ ಪ್ರಯೋಗಗಳು ಆಸ್ಟಿಯೋ ಆರ್ಥೈಟಿಸ್ (ಅಸ್ಥಿಸಂಧಿವಾತ), ರುಮಟಾಯ್ಡ್ ಆರ್ಥೈಟಿಸ್ (ರುಮಟಾಯ್ ಸಂಧಿವಾತ) ಮತ್ತು ಗೌಟ್ ನಂತಹ ಕಾಯಿಲೆಗಳ ಮೇಲೆ ನಡೆಸಲಾಗಿದ್ದು ಉತ್ತಮ ಹಾಗೂ ಪರಿಣಾಮಕಾರಿ ಫಲಿತಾಂಶ ನೀಡುವ ಬಗ್ಗೆ ಈ ಸಂಶೋಧನೆಗಳಿಂದ ಸಾಬೀತಾಗಿದೆ ಎಂದರು.

ಓಂ ಶ್ರೀ ಮಾರ್ಕೆಟಿಂಗ್ಸೊಲ್ಯೂಷನ್ಸ್ ಪ್ರೈ.ಲಿ ನ ಮ್ಯಾನೇಜಿಂಗ್ ಡೈರೆಕ್ಟರ್ ಶ್ರೀಮತಿ ಮಂಗಳಾಂಬಿಕೆ ಮಾತನಾಡಿ,

ವ್ಯಾಲ್ಯೂ ಪ್ರಾಡಕ್ಟ್ ಪ್ರೈವೇಟ್ ಲಿಮಿಟೆ-ಡ್, ಆಧುನಿಕ ಸಂಶೋಧನೆಗಳೊಂದಿಗೆ ಅನುಭವಿ ಆಯುರ್ವೇದ ವೈದ್ಯರು ಮತ್ತು ವಿಜ್ಞಾನಿಗಳ ಸಹಯೋಗದೊಂದಿಗೆ ಮತ್ತು ಸುಧಾರಿತ ಖ&ಆ ಸಂಶೋಧನಾ ತಂತ್ರಗಳನ್ನು ಬಳಸಿಕೊಂಡು ಅಮೃತ ನೋನಿ ಅರ್ಥೋ ಪ್ಲಸ್ ಅನ್ನು ಅಭಿವೃದ್ಧಿಪಡಿಸಿದೆ. ಅತ್ಯುತ್ತಮವಾದ ಯಶಸ್ಸು ಸಾಧಿಸಿರುವ ಈ ಉತ್ಪನ್ನವು ಭಾರತದಲ್ಲಿ ಆಸ್ಟ್ರಿಯೋಆರ್ಥೈಟಿಸ್, ರುಮಟಾಯ್ಡ್ ಆರ್ಥೈಟಿಸ್ ಮತ್ತು ಗೌಟ್ ನಿರ್ವಹಣೆಗಾಗಿ ಅತಿ ಹೆಚ್ಚು ಮಾರಾಟವಾಗುತ್ತಿರುವ ಉತ್ಪನ್ನವಾಗಿ ಹೊರಹೊಮ್ಮಿದೆ. ಇದರ ವಿಶಿಷ್ಟ ಮತ್ತು ಪರಿಣಾಮಕಾರಿ ಸೂತ್ರದಿಂದಾಗಿ 30 ಲಕ್ಷಕ್ಕೂ ಹೆಚ್ಚು ಸಂತೃಪ್ತ ಗ್ರಾಹಕರು ತಮ್ಮ ಮಂಡಿ ನೋವು, ಬೆನ್ನು ನೋವು, ಸೊಂಟ ನೋವಿನಂತಹ ಕೀಲು ನೋವಿನ ಸಮಸ್ಯೆಗಳಿಗೆ ಗಮನಾರ್ಹ ಪರಿಹಾರವನ್ನು ಕಂಡುಕೊಂಡಿದ್ದಾರೆ.

ಆಯುರ್ವೇದ ಔಷಧಿಗಳನ್ನು ಹ್ಯೂಮನ್ ಕ್ಲಿನಿಕಲ್ ಟ್ರಯಲ್ಗಳಿಗೆ ಒಳಪಡಿಸುವುದು ಅಪರೂಪವಾಗಿದ್ದರೂ ನಂಬಿಕೆ ಮತ್ತು ಪ್ರಾಮಾಣಿಕತೆಯನ್ನು ನಿರ್ಮಿಸಲು ಇದು ಅತ್ಯಂತ ಅಗತ್ಯ ಕ್ರಮವಾಗಿದೆ. ಇದು ಅಮೃತ್ ನೋನಿ ಸಾಧಿಸಿದ ಮೊದಲ ಯಶಸ್ಸಲ್ಲ, ಈ ಹಿಂದೆ, ಅಮೃತ್ ನೋನಿ ಡಿ ಪ್ಲಸ್‌ಗೆ ಸಂಬಂಧಿಸಿದಂತೆ ಯಶಸ್ವೀ ಹ್ಯೂಮನ್ ಕ್ಲಿನಿಕಲ್ ಟ್ರಯತ್ನು ನಡೆಸಿ ಯಶಸ್ವಿಯಾಗಿದೆ. ನಮ್ಮ ಸಂಸ್ಥೆಯು ಸಂಶೋಧನೆಗಳಲ್ಲಿ ಉತ್ಸುಕವಾಗಿದ್ದು ಕ್ಯಾನ್ಸಿ-ಕೇರ್ ಎಂಬ ಉತ್ಪನ್ನದೊಂದಿಗೆ ಕ್ಯಾನ್ಸರ್ ಕೋಶಗಳ ಮೇಲೆ ಸೆಲ್ ಲೈನ್ ಅಧ್ಯಯನಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಇದರೊಂದಿಗೆ ಆರೋಗ್ಯಕರ ಸಮಾಜದ ನಿರ್ಮಾಣದತ್ತ ತನ್ನ ಪಾತ್ರವನ್ನು ನಿರ್ವಹಿಸುತ್ತಿದೆ ಎಂದರು.

ಈ ಉತ್ಪನ್ನದಲ್ಲಿ ಬಳಸಲಾದ ನೋನಿ ಹಾಗೂ ಔಷಧೀಯ ಗಿಡಮೂಲಿಕೆಗಳು ಅದರ ಜನಪ್ರಿಯತೆ ಮತ್ತು ಪರಿಣಾಮಕಾರಿತ್ವಕ್ಕೆ ಕಾರಣವಾಗಿದೆ. ದೀರ್ಘಕಾಲೀನ ಕೀಲುನೋವಿನ ಸಮಸ್ಯೆಗಳಿಗೆ ಪರಿಹಾರವಾಗಿ ಬಳಸಲು ಇದು ಅತ್ಯುತ್ತಮ ಆಯ್ಕೆಯಾಗಿದೆ ಎಂದು ತಿಳಿಸಿದರು.

ನಳಂದ ಕ್ಲಿನ್ಸರ್ವ್ ಬೆಂಗಳೂರು ಸಂಸ್ಥೆಯ ಕ್ಲೀನಿಕಲ್ ರಿಸರ್ಚ್ ಮುಖ್ಯಸ್ಥರಾದ ಡಾ. ಬಿ.ಜಿ. ವಾರುಣಿ ಬಿಎಎಂಎಸ್, ಎಂ.ಡಿ ( ಆಯು) ಮಾತನಾಡಿ, ಅಮೃತ ನೋನಿ ಅರ್ಥೋ ಪ್ರಸ್ನ ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ಇನ್ನಷ್ಟು ದೃಢೀಕರಿಸಲು, CTRI-Reg India ಮಾರ್ಗಸೂಚಿಗಳಡಿ ನಲಂದಾ ಕ್ಲಿನ್ಸರ್ವ್ ಸಂಸ್ಥೆಯ ಸಹಯೋಗದೊಂದಿಗೆ ವಾರಾಣಸಿಯಲ್ಲಿ ಹ್ಯೂಮನ್ ಕ್ಲಿನಿಕಲ್ ಟ್ರಯಲ್ ಅನ್ನು ನಡೆಸಲಾಯಿತು. ಈ ಪ್ರಯೋಗದಲ್ಲಿ, ಆಸ್ಟಿಯೋಆರ್ಥೈಟಿಸ್, ರುಮಟಾಯ್ಡ್ ಆರ್ಥೈಟಿಸ್ ಮತ್ತು ಗೌಟ್ ಸಂಶೋಧನೆಗೆ ಪ್ರತಿಯೊಂದ-ಕ್ಕೊಂದರಂತೆ ಪ್ರತ್ಯೇಕವಾಗಿ 40 ರೋಗಿಗಳನ್ನು ಆಯ್ಕೆ ಮಾಡಿ, ಆಕ್ಟಿವ್ಮತ್ತು ಪ್ಲಾಸಿಬೊ ಗುಂಪುಗಳಾಗಿ ಆಯ್ಕೆ ಮಾಡಿ 6 ತಿಂಗಳುಗಳಲ್ಲಿ 2 ತಿಂಗಳ ಅಂತರದಲ್ಲಿ ಮೂರು ಭೇಟಿ ಮಾಡುವ ಮೂಲಕ ಈ ಪ್ರಯೋಗವನ್ನು ಪೂರ್ಣ ಗೊಳಿಸಲಾಯಿತು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಮೃತ್‌ನೋನಿ ಹೆಲ್ತ್‌ಕೇರ್ ವಿಭಾಗದ ಮುಖ್ಯಸ್ಥರಾದ ಡಾ. ಸಂದೀಪ್ ಬೇಣಕಲ್, ಬಿಎಎಂಎಸ್, ಡಿ.ಎನ್.ಡಿ, ಡಾ. ಮಹಾಂತಸ್ವಾಮಿ ಹಿರೇಮಠ್, ಬಿಎಎಂಎಸ್, ಎಂಡಿ (ಆಯು) ಉಪಸ್ಥಿತರಿದ್ದರು.

**ಸಂಶೋಧನೆಗಳು ಹಾಗೂ ಅದರ ಫಲಿತಾಂಶ:**

1.ಆಸ್ಟಿಯೋಆರ್ಥೈಟಿಸ್: ಪ್ಲಾಸಿಬೊ ಗುಂಪಿಗೆ ಹೋಲಿಸಿದರೆ ನೋವು, ಚಲನ ಸಾಮರ್ಥ್ಯ, ಇಖಖ ರಕ್ತದಲ್ಲಿನ ಕ್ಯಾಲ್ಸಿಯಂ ಮತ್ತು ಮೆಗ್ನೀಸಿಯಮ್ ಲೆವೆಲ್ ಮತ್ತು ಮೂಳೆ ಸಾಂದ್ರತೆ (ಃಒಆ) ನಲ್ಲಿ, ಗಮನಾರ್ಹ ಸುಧಾರಣೆಗಳನ್ನು ಗಮನಿಸಲಾಗಿದೆ.

2.ರುಮಟಾಯ್ಡ್ ಆರ್ಥೈಟಿಸ್: ರುಮಟಾಯ್ಡ್ ಆರ್ಥೈಟಿಸ್ನಲ್ಲಿ ಸಿ-ರಿಯಾಕ್ಟಿವ್ ಪ್ರೋಟೀನ್ (ಅಖಿಕ), ರುಮಟಾಯ್ ಫ್ಯಾಕ್ಟರ್ (ಖಂ ಫ್ಯಾಕ್ಟರ್ ಮತ್ತು ಎರಿಥ್ರೋಸೈಟ್ ಸೆಡಿಮೆಂಟೇಶನ್ ರೇಟ್ (ಇಖಖ) ನಲ್ಲಿ ಕಡಿತ ಗಮನಿಸಲಾಯಿತು. ಸೀರಮ್ ಇಮ್ಯುನೊಗ್ಲಾಬ್ಯುಲಿನ್ ಮಟ್ಟಗಳು (ಖಿಂಉ ಖಿಂಚಿ, ಖಿಂಇ ಮತ್ತು ಆಂಟಿನ್ಯೂಕ್ಲಿಯರ್ ಆಂಟಿಬಾಡಿ (ಂಓಂ) ಮಟ್ಟಗಳು ಸಹ ಗಮನಾರ್ಹ ಸುಧಾರಣೆಯನ್ನು ತೋರಿಸಿವೆ.

3.ಗೌಟ್: ಗೌಟ್ ರೋಗಿಗಳಲಿ ನೋವು ಮತ್ತು ಉರಿಯೂತದಲ್ಲಿ ಗಣನೀಯ ಇಳಿಕೆಯನ್ನು ಅನುಭವಿಸುವುದರ ಜೊತೆಗೆ ಆರೋಗ್ಯ ಗುಣಮಟ್ಟದಲ್ಲಿ ಗಮನಾರ್ಹ ಸುಧಾರಣೆಯನ್ನು ಕಂಡಿದ್ದಾರೆ. ಕಿಡ್ನಿ, ಮತ್ತು ಲಿವರ್ಗಳ ಮೇಲೆ ಯಾವುದೇ ರೀತಿಯ ಅಡ ಪರಿಣಾಮಗಳಿಲ್ಲದೆ ಚೆನ್ನಾಗಿ ಕಾರ್ಯನಿರ್ವಹಿಸುರುತ್ತದೆ.

# ಸರಸ್ವತಿ ಸಸಿಮಠಗೆ ಚಾಲುಕ್ಯ ವಿಕ್ರಮಾದಿತ್ಯ ಪ್ರಶಸ್ತಿ ಪ್ರಧಾನ



**ಕೊಪ್ಪಳ :** ಜಿಲ್ಲೆಯ ಯಲಬುರ್ಗಾ ತಾಲೂಕಿನ ಚಿಕ್ಕ ಮ್ಯಾಗೇರಿ ಗ್ರಾಮದ ನಿವಾಸಿಯಾಗಿರುವ ಇವರು ಸದ್ಯ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕುಕನೂರು ಡಿಪೋ ದಲ್ಲಿ ತಾಂತ್ರಿಕ ಸಹಾಯಕರಾಗಿ ಕಾರ್ಯ ನಿರ್ವಹಿಸುತ್ತಿರುವ ಶ್ರೀಮತಿ ಸರಸ್ವತಿ ಸಸಿ ಮಠ ರವರು ಕಳೆದ ಸುಮಾರು ಒಂದು ದಶಕದಿಂದ ಕುಕುನೂರು ಘಟಕದಲ್ಲಿ ತಾಂತ್ರಿಕ ಸಹಾಯಕರಾಗಿ ಉತ್ತಮ ಸೇವೆ ಸಲ್ಲಿ ಸುತ್ತಿರುವ ಹಿನ್ನೆಲೆಯಲ್ಲಿ ಅವರ ಉತ್ತಮ ತಾಂತ್ರಿಕ ಸೇವೆ ಪರಿಗಣಿಸಿ ಅವರನ್ನು ಐತಿಹಾಸಿಕ ಧಾರ್ಮಿಕ ಪ್ರಸಿದ್ಧ ಇಟಗಿ ಉತ್ಸವದಲ್ಲಿ ರವಿವಾರ ಸಂಜೆ ಜರಗಿದ ಸಮಾರೋಪ ಸಮಾರಂಭದಲ್ಲಿ ಚಾಲುಕ್ಯ ವಿಕ್ರಮಾದಿತ್ಯ ರಾಜ್ಯಮಟ್ಟದ ಪ್ರಶಸ್ತಿಯನ್ನು ಪ್ರಧಾನ ಮಾಡಿ ಸತ್ಕರಿಸಲಾಯಿತು,

ಸಮಾರಂಭದಲ್ಲಿ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠ ಕುಕನೂರಿನ ಶ್ರೀ ಮಹಾದೇವ ದೇವರು, ಸಮ್ಮೇಳನದ ಅಧ್ಯಕ್ಷರಾದ ಬಸವರಾಜ್ ಅಡಿವೆಪ್ಪ ಗೌಡ್ರು ಕೊಪ್ಪಳ ಜಿಲ್ಲಾ ನಾಗರಿಕರ ವೇದಿಕೆಯ ಗೌರವಾಧ್ಯಕ್ಷರಾದ ಎಂಬಿ ಅಳವಂಡಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸದಸ್ಯರಾದ ಎಂ ಸಾಧಿಕ್ ಅಲಿ ಸಂಘಟಕರಾದ ಮಹೇಶ್ ಬಾಬು ಸುರುವೇ ಸೇರಿದಂತೆ ಜನಪ್ರತಿನಿಧಿಗಳು ವಿವಿಧ ಸಂಘಟನೆಗಳ ಮುಖ್ಯಸ್ಥರು ಅನೇಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು,

ಸಾರಿಗೆ ನಿಗಮ ಕುಕನೂರು ಘಟಕದ ತಾಂತ್ರಿಕ ಸಹಾಯಕಿ ಶ್ರೀಮತಿ ಸರಸ್ವತಿ ಸಸಿಮಠ ರವರಿಗೆ ರಾಜ್ಯಮಟ್ಟದ ಚಾಲುಕ್ಯ ವಿಕ್ರಮಾದಿತ್ಯ ಪ್ರಶಸ್ತಿ ಲಭಿಸಿರುವುದಕ್ಕೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕುಕನೂರು ಘಟಕದ ನೌಕರ ವರ್ಗ ಸೇರಿದಂತೆ ವಿವಿಧ ಮಹಿಳಾ ಸಂಘಟನೆಗಳು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ಜೆಡಿಎಸ್ ಪಕ್ಷ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡ ಸಿದ್ದಲಿಂಗೇಗೌಡ..!



**ಪಾಂಡವಪುರ :** ಜೆಡಿಎಸ್ ಮುಖಂಡ ಹಾಗೂ ಚಿನಕುರಳಿ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಸಿ.ಸಿದ್ದಲಿಂಗೇಗೌಡ ಅವರು ಜೆಡಿಎಸ್ ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು.

ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರ ನಾಯಕತ್ವವನ್ನು ಮೆಚ್ಚಿ ಜೆಡಿಎಸ್ ತೊರೆದು ಸಿ.ಸಿದ್ದಲಿಂಗೇಗೌಡ ಅವರು ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಗೊಂಡಿದ್ದಾರೆ.

ಜೆಡಿಎಸ್ ಪಕ್ಷ ತೊರೆದು ಕಾಂಗ್ರೆಸ್ ಪಕ್ಷ-ಕ್ಕೆ ಸೇರ್ಪಡೆಗೊಂಡ ಸಿ.ಸಿದ್ದಲಿಂಗೇಗೌಡ ಅವರಿಗೆ ಕಾಂಗ್ರೆಸ್ ಪಕ್ಷದ ಶಾಲು ಹೊದಿಸುವ ಮೂಲಕ ಕೃಷಿ, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಆತ್ಮೀಯವಾಗಿ ಪಕ್ಷಕ್ಕೆ ಬರಮಾಡಿಕೊಂಡರು.

ಈ ವೇಳೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಮನ್ ಮುಲ್ ನಿರ್ದೇಶಕ ಕೆ.ರಾಮಚಂದ್ರು, ತಾಲೂಕು ಕಿಸಾನ್ ಕಾಂಗ್ರೆಸ್ ಅಧ್ಯಕ್ಷ ಸಿ.ಆರ್. ರಮೇಶ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಚ್.ತ್ಯಾಗರಾಜು, ಮುಖಂಡರಾದ ಹರಳಹಳ್ಳಿ ಸಿದ್ದಲಿಂಗಯ್ಯ, ಅಂತನಹಳ್ಳಿ ಬಸವರಾಜು ಇತರರಿದ್ದರು.

**ವರದಿ: ಸಾಯಿಕುಮಾರ್. ಎನ್. ಕೆ**

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State